ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ   NIMMURU SUDDI

ಸಂಪಾದಕರು: ಸುಂದರ್   Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 129 RNI Number : KNKAN/25/A2770 18-05-2026 Monday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :129 ರಾಯಚೂರು 18-05-2026 ಸೋಮವಾರ ಪುಟ 04 ಬೆಲೆ ರೂ.2/- ಮೊ:8660146563

ಸಿಎನ್‌ಜಿ ದರ ಮತ್ತೆ 1 ರೂ. ಏರಿಕೆ

ನವದೆಹಲಿ,ಮೇ 17- ಸಂಕುಚಿತ ನೈಸರ್ಗಿಕ ಅನಿಲ (ಸಿಎನ್‌ಜಿ) ಬೆಲೆಯನ್ನು ಇಂದು ಮತ್ತೆ ಕೆಜಿಗೆ 1 ರೂ. ಹೆಚ್ಚಿಸಲಾಗಿದ್ದು, ಕಳೆದ ಎರಡು ದಿನಗಳಲ್ಲಿ ಎರಡನೇ ಏರಿಕೆಯಾಗಿದೆ. ಮಧ್ಯಪ್ರಾಚ್ಯದಲ್ಲಿ ಹೆಚ್ಚುತ್ತಿರುವ ಸಂಘರ್ಷದ ಹಿನ್ನೆಲೆಯಲ್ಲಿ ಹಾರ್ಮುಜ್ ಜಲಸಂಧಿಯ ದಿಗ್ಬಂಧನದಿಂದಾಗಿ ಇಂಧನ ಕಂಪನಿಗಳ ಮೇಲೆ ನಿರಂತರ ಒತ್ತಡದ ಮಧ್ಯೆ ಹೊಸ ಏರಿಕೆಯಾಗಿದೆ.

ದೆಹಲಿಯಲ್ಲಿ ಸಿಎನ್‌ಜಿ ಈಗ ಕೆಜಿಗೆ 80.09 ರೂ., ನೋಯ್ಡಾ ಮತ್ತು ಗಾಜಿಯಾಬಾದ್‌ನಲ್ಲಿ ಪರಿಷ್ಕೃತ ದರ ಕೆಜಿಗೆ 88.70 ರೂ. ಕೇವಲ ಎರಡು ದಿನಗಳಲ್ಲಿ ಇದು ಎರಡನೇ ಬೆಲೆ ಏರಿಕೆಯಾಗಿದೆ. ಇದಕ್ಕೂ ಮೊದಲು ಮೇ 15 ರಂದು ಸಿಎನ್‌ಜಿ ಬೆಲೆಯನ್ನು ಕೆಜಿಗೆ 2 ರೂ.ಗೆ ಹೆಚ್ಚಿಸಲಾಗಿತ್ತು.

ಸರ್ಕಾರಿ ಸ್ವಾಮ್ಯದ ತೈಲ ಸಂಸ್ಥೆಗಳು ಇಂಧನ ಬೆಲೆಯಲ್ಲಿ ಏರಿಕೆಯ ಹೊರತಾಗಿಯೂ 11 ವಾರಗಳವರೆಗೆ ಯಾವುದೇ ಬದಲಾವಣೆ ಮಾಡದೆ ಇರಿಸಿದ್ದವು, ಆದರೆ ಕಾರ್ಯಾಚರಣೆಗಳು ಆರ್ಥಿಕವಾಗಿ ಅಸಮರ್ಥನೀಯವಾದ ನಂತರ ಹೆಚ್ಚಳದ ಒಂದು ಭಾಗವನ್ನು ಅಂಗೀಕರಿಸಿದವು. ಏಪ್ರಿಲ್ 2022 ರಿಂದ ಬೆಲೆಗಳು ಸ್ಥಗಿತಗೊಂಡಿವೆ, ಆದರೆ ಲೋಕಸಭಾ ಚುನಾವಣೆಗೆ ಸ್ವಲ್ಪ ಮೊದಲು ಮಾರ್ಚ್ 2024 ರಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ಮೇಲೆ ತಲಾ ಲೀಟರ್‌ಗೆ 2 ರೂ.ಗಳಷ್ಟು ಕಡಿತಗೊಳಿಸಲಾಯಿತು.

ಉಕ್ರೇನ್ ಮೇಲೆ ರಷ್ಯಾದ ಆಕ್ರಮಣದ ನಂತರ ಅಂತರರಾಷ್ಟ್ರೀಯ ತೈಲ ಬೆಲೆಗಳು ಗಗನಕ್ಕೇರಿದ ಕಾರಣ ದೇಶೀಯ ಗ್ರಾಹಕರನ್ನು ರಕ್ಷಿಸಲು ಸರ್ಕಾರಿ ಸ್ವಾಮ್ಯದ ಇಂಡಿಯನ್ ಆಯಿಲ್ ಕಾರ್ಪೊರೇಷನ್ (ಐಒಸಿ), ಭಾರತ್ ಪೆಟ್ರೋಲಿಯಂ ಕಾರ್ಪೊರೇಷನ್ ಲಿಮಿಟೆಡ್ (ಬಿಪಿಸಿಎಲ್) ಮತ್ತು ಹಿಂದೂಸ್ತಾನ್ ಪೆಟ್ರೋಲಿಯಂ ಕಾರ್ಪೊರೇಷನ್ ಲಿಮಿಟೆಡ್ (ಎಚ್‌ಪಿಸಿಎಲ್) ಏಪ್ರಿಲ್ 2022 ರಲ್ಲಿ ದೈನಂದಿನ ಬೆಲೆ ಪರಿಷ್ಕರಣೆಯನ್ನು ಕೈಬಿಟ್ಟಿದ್ದವು.

2022-23ರ ಆರ್ಥಿಕ ವರ್ಷದ ಮೊದಲಾರ್ಧದಲ್ಲಿ ಅವರು ಭಾರೀ ನಷ್ಟವನ್ನು ಅನುಭವಿಸಿದರು. ನಂತರದ ತಿಂಗಳುಗಳಲ್ಲಿ ದರಗಳು ಕುಸಿದಾಗ ಅವರು ಅದನ್ನು ಮರುಪಡೆಯಲು ಸಾಧ್ಯವಾಯಿತು. ಆದರೆ ಪಶ್ಚಿಮ ಏಷ್ಯಾದಲ್ಲಿನ ಯುದ್ಧವು ಮತ್ತೆ ಅಂತರರಾಷ್ಟ್ರೀಯ ತೈಲ ಬೆಲೆಗಳನ್ನು ಶೇಕಡಾ 50 ಕ್ಕಿಂತ ಹೆಚ್ಚು ಹೆಚ್ಚಿಸಿದೆ. ಪಶ್ಚಿಮ ಏಷ್ಯಾದಲ್ಲಿ ಯುದ್ಧ ಪ್ರಾರಂಭವಾಗುವ ಮೊದಲು ಫೆಬ್ರವರಿಯಲ್ಲಿ ಭಾರತ ಆಮದು ಮಾಡಿಕೊಳ್ಳುವ ಕಚ್ಚಾ ತೈಲದ ಬುಟ್ಟಿ ಬ್ಯಾರೆಲ್‌ಗೆ ಸರಾಸರಿ 69 ಡಾಲರ್ ಆಗಿತ್ತು. ನಂತರದ ತಿಂಗಳುಗಳಲ್ಲಿ ಇದು ಬ್ಯಾರೆಲ್‌ಗೆ ಸರಾಸರಿ 113-114 ಡಾಲರ್ ಆಗಿತ್ತು.



ಭಾರೀ ಮಳೆ : ಸಿಡಿಲು ಬಡಿದು ರೈತ ಮೃತ್ಯು

ಲಿಂಗಸುಗೂರು : ತಾಲ್ಲೂಕಿನ ಮುದಗಲ್ ಭಾಗದಲ್ಲಿ ಸಿಡಿಲು ಬಡಿದು ರೈತನೊಬ್ಬ ಮೃತಪಟ್ಟಿದ್ದು, ಮತ್ತೊಬ್ಬ ರೈತ ಗಾಯಗೊಂಡ ಘಟನೆ ಕೋಮಲಾಪುರ ಗ್ರಾಮದಲ್ಲಿ ನಡೆದಿದೆ.

ಮೃತ ರೈತನನ್ನು ಕರಿಯಪ್ಪ ಅಯ್ಯಪ್ಪ ಗಣೆಕಿಹಾಳ (46) ಎಂದು ಗುರುತಿಸಲಾಗಿದೆ. ಗಾಯಗೊಂಡ ಬಸವರಾಜ ಜಗಂಡಿ ಅವರನ್ನು ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ.

ಗ್ರಾಮದ ಹಿಂಭಾಗದಲ್ಲಿ ಟ್ರ್ಯಾಕ್ಟರ್‌ಗೆ ತಿಪ್ಪೆಗೊಬ್ಬರ ತುಂಬುವ ವೇಳೆ ಏಕಾಏಕಿ ಸಿಡಿಲು ಬಡಿದ ಪರಿಣಾಮ ಈ ದುರ್ಘಟನೆ ಸಂಭವಿಸಿದೆ ಎಂದು ತಿಳಿದು ಬಂದಿದೆ. ಘಟನೆ ಮುದಗಲ್ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದ್ದು, ಸ್ಥಳಕ್ಕೆ ಕಂದಾಯ ಇಲಾಖೆ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಸಿಡಿಲಿಗೆ ಮೂರು ಮೇವಿನ ಬಣವೆಗಳು ಭಸ್ಮ :

ಮೆಗಳಪೇಟೆ ಗ್ರಾಮದ ರೈತರ ಜಮೀನಿನಲ್ಲಿ ಸಂಗ್ರಹಿಸಿದ್ದ ಜಾನುವಾರುಗಳ ಮೇವು ಹಾಗೂ ವಟ್ಟಿನ ಬಣವಿಗೆ ಸಿಡಿಲು ತಾಗಿದ ಪರಿಣಾಮ ಮೂರು ಬಣವೆಗಳು ಸಂಪೂರ್ಣ ಸುಟ್ಟು ಕರಕಲಾಗಿವೆ. ಬಣವೆಯ ಸಮೀಪದಲ್ಲೇ ರೇಷ್ಮೆ ಶೆಡ್ ಹಾಗೂ ಜಾನುವಾರುಗಳು ಇದ್ದರೂ, ಸ್ಥಳೀಯ ರೈತರು ಸಮಯಪ್ರಜ್ಞೆ ಮೆರೆದು ಬೆಂಕಿ ಹರಡುವುದನ್ನು ತಡೆದ ಪರಿಣಾಮ ದೊಡ್ಡ ಅನಾಹುತ ತಪ್ಪಿದೆ.

ಇಲಕಲ್‌ನಿಂದ ಅಗ್ನಿಶಾಮಕ ದಳದ ಸಿಬ್ಬಂದಿ ಆಗಮಿಸಿ ಬೆಂಕಿಯನ್ನು ನಂದಿಸುವಲ್ಲಿ ಯಶಸ್ವಿಯಾದರು.

ಜೀವಹಾನಿ ಹಾಗೂ ಮೇವು ನಷ್ಟಕ್ಕೊಳಗಾದ ರೈತರಿಗೆ ಸರ್ಕಾರ ತಕ್ಷಣ ಸೂಕ್ತ ಪರಿಹಾರ ನೀಡಬೇಕು ಎಂದು ಕರ್ನಾಟಕ ಜನಪರ ಹೋರಾಟ ಸಮಿತಿ ಜಿಲ್ಲಾ ಅಧ್ಯಕ್ಷ ಚನ್ನಬಸಪ್ಪ ಕಿಡದೂರು ಒತ್ತಾಯಿಸಿದ್ದಾರೆ.

ಇದೇ ವೇಳೆ ಮುದಗಲ್ ಪಟ್ಟಣ ಸಮೀಪದ ಕನ್ನಾಪೂರಹಟ್ಟಿಯ ಶ್ರೀ ಮಾರುತೇಶ್ವರ ದೇವಸ್ಥಾನದ ಮುಂಭಾಗದಲ್ಲಿದ್ದ ದೊಡ್ಡ ಮೇವಿನ ಮರ ಧರೆಗುರುಳಿದೆ. ಮರವು ಪರಮಯ್ಯ ಎಂಬುವರ ಮನೆಯ ಮೇಲೆಗೆ ಬಿದ್ದ ಪರಿಣಾಮ ಮನೆಗೆ ಹಾನಿಯಾಗಿದೆ. ಅದೃಷ್ಟವಶಾತ್ ಯಾವುದೇ ಜೀವಹಾನಿ ಸಂಭವಿಸಿಲ್ಲ ಎಂದು ತಿಳಿದು ಬಂದಿದೆ.



ಪೊಲೀಸ್-ಪತ್ರಕರ್ತರ ಸೌಹಾರ್ದ ಪಂದ್ಯದಲ್ಲಿ ಪತ್ರಕರ್ತರ ತಂಡಕ್ಕೆ ಭರ್ಜರಿ ಜಯ

9 ವಿಕೆಟ್‌ಗಳ ಗೆಲುವು , ಭೀಮೇಶ್ ಮಿಂಚಿನಾಟ, ಟ್ರೋಫಿ ವಿತರಿಸಿದ ಎಸ್‌ಪಿ ಅರುಣಾಂಕ್ಷುಗಿರಿ



ರಾಯಚೂರು,ಮೇ.17-

ನಗರದ ಪೊಲೀಸ್ ಪರೇಡ್ ಮೈದಾನದಲ್ಲಿ ರವಿವಾರ ನಡೆದ ಪೊಲೀಸ್ ಇಲಾಖೆ ಹಾಗೂ ಪತ್ರಕರ್ತರ ನಡುವಿನ ಸೌಹಾರ್ದ ಕ್ರಿಕೆಟ್ ಪಂದ್ಯಾವಳಿಯಲ್ಲಿ ಪತ್ರಕರ್ತರ ತಂಡ ಒಂಭತ್ತು ವಿಕೆಟ್‌ಗಳ ಭರ್ಜರಿ ಗೆಲುವು ದಾಖಲಿಸಿತು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಕ್ಷುಗಿರಿ ಬ್ಯಾಟ್ ಬೀಸಿ ಪಂದ್ಯಾವಳಿಗೆ ಚಾಲನೆ ನೀಡಿ ಮಾತನಾಡಿ, ಪೊಲೀಸರು ಹಾಗೂ ಪತ್ರಕರ್ತರು ದಿನದ 24 ಗಂಟೆಗಳ ಕಾಲ ಒತ್ತಡದ ನಡುವೆ ಕರ್ತವ್ಯ ನಿರ್ವಹಿಸುತ್ತಿದ್ದು, ಇಂತಹ ಕ್ರೀಡಾಕೂಟಗಳು ಮಾನಸಿಕ ಉತ್ಸಾಹ ಮತ್ತು ದೈಹಿಕ ಸದೃಢತೆಗೆ ಸಹಕಾರಿಯಾಗುತ್ತವೆ ಎಂದರು. ಕ್ರೀಡೆಗಳು ಆರೋಗ್ಯ ವೃದ್ಧಿಯ ಜೊತೆಗೆ ಪರಸ್ಪರ ಬಾಂಧವ್ಯ ಬೆಳೆಸಲು ಸಹಕಾರಿಯಾಗುತ್ತವೆ ಎಂದು ಹೇಳಿದರು.

ಟಾಸ್ ಗೆದ್ದ ಪತ್ರಕರ್ತರ ತಂಡದ ನಾಯಕ ಸಿದ್ಧಯ್ಯ ಸ್ವಾಮಿ ಮೊದಲಿಗೆ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡರು. ಮೊದಲು ಬ್ಯಾಟಿಂಗ್ ಮಾಡಿದ ಪೊಲೀಸ್ ಇಲಾಖೆ ತಂಡ 10 ಓವರ್‌ಗಳಲ್ಲಿ 69 ರನ್ ಗಳಿಸಿತು. ಪತ್ರಕರ್ತರ ತಂಡದ ಆಕ್ರಮಣಕಾರಿ ಬೌಲಿಂಗ್ ದಾಳಿಗೆ ಪೊಲೀಸ್ ತಂಡದ ಆಟಗಾರರು ಹೆಚ್ಚು ಹೊತ್ತು ಕ್ರೀಸ್‌ನಲ್ಲಿ ಉಳಿಯಲಿಲ್ಲ. ಅಣ್ಣಪ್ಪ ಮೇಟಿ, ಲಕ್ಷ್ಮಣ, ಶ್ರೀಕಾಂತ್ ಹಾಗೂ ಭೀಮೇಶ್ ಉತ್ತಮ ಬೌಲಿಂಗ್ ಪ್ರದರ್ಶನ ನೀಡಿದರು. ಎಸ್‌ಪಿ ಅರುಣಾಂಕ್ಷುಗಿರಿ 19 ರನ್ ಗಳಿಸಿ ನಾಟ್ ಔಟ್ ಆಗಿ ಉಳಿದರು.

ಬಳಿಕ ಬ್ಯಾಟಿಂಗ್ ಆರಂಭಿಸಿದ ಪತ್ರಕರ್ತರ ತಂಡ ಕೇವಲ 6 ಓವರ್‌ಗಳಲ್ಲಿ ಗುರಿ ತಲುಪುವ ಮೂಲಕ ಸುಲಭ ಜಯ ಸಾಧಿಸಿತು. ಕೇವಲ ಒಂದು ವಿಕೆಟ್ ನಷ್ಟಕ್ಕೆ 70 ರನ್ ಗಳಿಸಿದ ತಂಡದ ಪರವಾಗಿ ಭೀಮೇಶ್ ಪೂಜಾರ್, ಶ್ರೀಕಾಂತ್ ಸಾವೂರು ಹಾಗೂ ಮಲ್ಲನಗೌಡ ಆಕರ್ಷಕ ಬ್ಯಾಟಿಂಗ್ ಪ್ರದರ್ಶನ ನೀಡಿದರು. ಪಂದ್ಯ ಶ್ರೇಷ್ಠ ಪ್ರಶಸ್ತಿಯನ್ನು 42 ರನ್ ಗಳಿಸಿದ ಭೀಮೇಶ್ ಪಡೆದುಕೊಂಡರು.

ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಆರ್. ಗುರುನಾಥ ಮಾತನಾಡಿ, ಪೊಲೀಸರು ಹಾಗೂ ಪತ್ರಕರ್ತರು ಸಾರ್ವಜನಿಕ ಸೇವೆಯಲ್ಲಿ ತೊಡಗಿಸಿಕೊಂಡಿದ್ದು, ಇಂತಹ ಸೌಹಾರ್ದ ಕ್ರೀಡಾಕೂಟಗಳು ಆರೋಗ್ಯ ರಕ್ಷಣೆ ಹಾಗೂ ಕ್ರೀಡಾಸಕ್ತಿಯನ್ನು ಹೆಚ್ಚಿಸಲು ಸಹಕಾರಿಯಾಗುತ್ತವೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ಹರೀಶ್, ಕುಮಾರಸ್ವಾಮಿ, ಡಿವೈಎಸ್‌ಪಿಗಳಾದ ಶಾಂತವೀರ, ಪರಮಾನಂದ ಗೋಡ್ಕೆ, ರಿಪೋರ್ಟರ್ಸ್ ಗಿಲ್ಡ್ ಅಧ್ಯಕ್ಷ ವಿಜಯಕುಮಾರ್ ಜಾಗಟಗಲ್, ಹಿರಿಯ ಪತ್ರಕರ್ತರಾದ ಶಿವಮೂರ್ತಿ ಹಿರೇಮಠ, ಮಲ್ಲಿಕಾರ್ಜುನಯ್ಯ, ಸುರೇಶ್ ರೆಡ್ಡಿ, ಮಂಜುನಾಥ ಸಾಲಿ, ವಾಗೀಶ್ ಪಾಟೀಲ್, ಗೌಡಪ್ಪಗೌಡ, ಮಹಾನಂದ ನಾಯಕ, ಜಗನ್ನಾಥ ಪೂಜಾರ್ ಸೇರಿದಂತೆ ಪೊಲೀಸ್ ಅಧಿಕಾರಿಗಳು, ಸಿಬ್ಬಂದಿ ಹಾಗೂ ಪತ್ರಕರ್ತರು ಉಪಸ್ಥಿತರಿದ್ದರು.

ಪಂದ್ಯದಲ್ಲಿ ಗೆಲುವು ಸಾಧಿಸಿದ ಪತ್ರಕರ್ತರ ತಂಡಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಕ್ಷುಗಿರಿ ಟ್ರೋಫಿ ವಿತರಿಸಿದರು.



ಆರ್.ಡಿ.ಸಿ.ಸಿ ಬ್ಯಾಂಕ್ ನೇಮಕಾತಿ ರದ್ದುಗೊಳಿಸಿ

ಹೊಸ ರೋಷ್ಟರ್ ಬಿಂದು ಪ್ರಕಾರ ನೇಮಕಾತಿ ಪ್ರಕ್ರಿಯೆ ಪ್ರಾರಂಭಿಸಬೇಕು

ರಾಯಚೂರು .ಮೇ.17

ರಾಯಚೂರು ಮತ್ತು ಕೊಪ್ಪಳ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ನಲ್ಲಿ ನಡೆಯುತ್ತಿರುವ ನೇಮಕಾತಿ ಪ್ರಕ್ರಿಯೆಯನ್ನು ತಕ್ಷಣ ರದ್ದುಪಡಿಸಿ, ಸರ್ಕಾರದ ಹೊಸ ರೋಸ್ಟರ್ ಬಿಂದುಗಳು ಹಾಗೂ ಒಳಮೀಸಲಾತಿ ನಿಯಮಾವಳಿಗಳ ಪ್ರಕಾರ ಮರು ಅಧಿಸೂಚನೆ ಹೊರಡಿಸಬೇಕೆಂದು ಕರ್ನಾಟಕ ದಲಿತ ಸಂಘರ್ಷ ಸಮಿತಿ (ರಿ) ಭೀಮವಾದ ಒತ್ತಾಯಿಸಿದೆ.

ನಗರದಲ್ಲಿ ಭಾನುವಾರ ನಡೆದ ಪತ್ರಿಕಾ ಗೋಷ್ಠಿಯಲ್ಲಿ ರಾಜ್ಯ ಸಂಚಾಲಕ ರವೀಂದ್ರನಾಥ ಪಟ್ಟಿ ಮಾತನಾಡಿ, ಬ್ಯಾಂಕ್ ವತಿಯಿಂದ 21-11-2025ರಂದು ಹಾಗೂ ಹೊರಡಿಸಲಾದ ನೇಮಕಾತಿ ಅಧಿಸೂಚನೆ 09-05-2026ರಂದು ನಡೆಸಲಾಗುತ್ತಿರುವ ಮೌಖಿಕ ಸಂದರ್ಶನಗಳು ಸರ್ಕಾರದ ಇತ್ತೀಚಿನ ಆದೇಶಗಳಿಗೆ ಎಂದು ವಿರುದ್ದವಾಗಿವೆ ನೇಮಕಾತಿಯಲ್ಲಿ ಮೂರುಕ್ಕಿಂತ ಆರೋಪಿಸಿದರು. ಕಡಿಮೆ ಪರಿಶಿಷ್ಟ ಜಾತಿ ಹುದ್ದೆಗಳು ಪರಿಶಿಷ್ಟ ಜಾತಿಗಳ ಒಳಮೀಸಲಾತಿ ಸಂಬಂಧ ಸುಪ್ರೀಂ ಕೋರ್ಟ್ ತೀರ್ಪಿನ ಅನ್ವಯ ರಾಜ್ಯ ಸರ್ಕಾರವು ನಿವೃತ್ತ ನ್ಯಾಯಮೂರ್ತಿ ಹೆಚ್. ಡಿಸಿಸಿ ಬ್ಯಾಂಕ್ ನೇಮಕಾತಿಯಲ್ಲಿ 24. ನಾಗಮೋಹನದಾಸ್ ಪ್ರವರ್ಗವಾರು ಹುದ್ದೆಗಳನ್ನು ಹಂಚಿಕೆ ನೇತೃತ್ವದಲ್ಲಿ ಆಯೋಗ ರಚಿಸಿ ಮಾಡಿರುವುದು ಸರ್ಕಾರದ ಆದೇಶ ವರದಿ ಪಡೆದುಕೊಂಡಿತ್ತು. ಅದರ ಆಧಾರದ ಮೇಲೆ

3 ನೇ ಪುಟಕ್ಕೆ

ಗುಣಮಟ್ಟದ ಕಾಮಗಾರಿಗಳು ಕೆಲಸಯಾಗಲಿ-ಬಾಬುಗೌಡ ಬಾದರ್ಲಿ



ಸಿಂಧನೂರು,ಮೇ.17-

ರವಿವಾರ ಮೇ 17 ಇಂದು ಕನ್ನಾರಿ ಗ್ರಾಮದಲ್ಲಿ ನಿರ್ಮಿತ ಕೇಂದ್ರ ₹40 ಲಕ್ಷ ವೆಚ್ಚದಲ್ಲಿ ನಿರ್ಮಾಣವಾಗುತ್ತಿರುವ ಸಿಸಿ ರಸ್ತೆ ಕಾಮಗಾರಿಗೆ ಶಾಸಕರ ಅನುಪಸ್ಥಿತಿಯಲ್ಲಿ ಅವರ ಪುತ್ರ ಸುಡಾ ಅಧ್ಯಕ್ಷರಾದ ಬಾಬು ಗೌಡ ಬಾದರ್ಲಿ ಭೂಮಿ ಪೂಜೆ ನೆರವೇರಿಸಿ ಕಾಮಗಾರಿಗೆ ಚಾಲನೆ ನೀಡಿದರು.

ನಂತರ ಮಾತನಾಡಿದ ಅವರು ಕಾಮಗಾರಿಗಳು ಕೆಲಸವನ್ನು ನಿಗದಿತ ಸಮಯದಲ್ಲಿ ಕೆಲಸವನ್ನು ಮಾಡಬೇಕು ಮತ್ತು ಸಾರ್ವಜನಿಕರ ಮೂಲಕ ಯಾವುದೇ ದೂರುಗಳ ಬರಕೂಡದು ಒಟ್ಟಾರೆ ಗುಣಮಟ್ಟದ ಕಾಮಗಾರಿಗಳು ಕೆಲಸ ಯಾಗಬೇಕು ಎಂದು ಹೇಳಿದರು

ಈ ಸಂದರ್ಭದಲ್ಲಿ ಗ್ರಾಮಸ್ಥರು, ಮುಖಂಡರು ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದು, ಕಾಮಗಾರಿ ಗುಣಮಟ್ಟದಿಂದ ಹಾಗೂ ಶೀಘ್ರದಲ್ಲಿ ಪೂರ್ಣಗೊಳ್ಳಬೇಕೆಂದು ಆಶಿಸಿದರು. ಗ್ರಾಮ ಅಭಿವೃದ್ಧಿಗೆ ರಸ್ತೆ ಕಾಮಗಾರಿಗಳು ಅತ್ಯಂತ ಅಗತ್ಯವಾಗಿದ್ದು, ಈ ಸಿಸಿ ರಸ್ತೆ ನಿರ್ಮಾಣದಿಂದ ಸಾರ್ವ ಜನಿಕರಿಗೆ ಉತ್ತಮ ಸಂಚಾರ ಸೌಲಭ್ಯ ದೊರೆಯಲಿದೆ ಎಂದರು

ಈ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಹಾಗೂ ಗ್ರಾಮಸ್ಥರು ಸೇರಿದಂತೆ ಇತರರು ಉಪಸ್ಥಿತರಿದ್ದರು

ಕಿರುಕುಳ ಪೋಕ್ಸೋ ಪ್ರಕರಣ ಇಬ್ಬರು ಆರೋಪಿಗಳ ಬಂಧನ



ಲಿಂಗಸುಗೂರು ,ಮೇ.17-

ಪಟ್ಟಣದ ವಾರ್ಡ್ ನಂ. 4 ರ (ಜನತಾ ಕಾಲೋನಿ) ಯ ನಿವಾಸಿ ಅಮರೇಶ್ ನಾಯಕ ಈತನು ತನ್ನ ಮಗಳು 7 ನೇ ತರಗತಿ ಓದುತ್ತಿದ್ದಾಗ ಋತುಮತಿಯಾಗಿದ್ದು, ಆಕೆಯು ಮನೆಯಲಿ ಒಬ್ಬಳೆ ಇದ್ದಾಗ ತಂದೆ ಅಮರೇಶ್ ಮೈ ಕೈ ಮುಟ್ಟಿ ಕೆಟ್ಟದಾಗಿ ವರ್ತನೆ ಮಾಡುತ್ತಿದ್ದು ಮತ್ತು ಈ ವಿಷಯವನ್ನು ಯಾರಿಗೂ ಹೇಳದಂತೆ ಬೆದರಿಸುತ್ತಿದ್ದು.

ನಂತರ ಬಾಲಕಿ 9 ನೇ ತರಗತಿ ಓದುತ್ತಿದ್ದಾಗ ಅಮರೇಶ್ ಈತನು ತನ್ನ ಮನೆಯಲ್ಲಿ ಮಗಳಿಗೆ ಒಂದು ಸಲ ಮೈ, ಕೈ ಮುಟ್ಟಿ ಆಕೆಯೊಂದಿಗೆ ಬಲವಂತವಾಗಿ ಅತ್ಯಾಚಾರ ಮಾಡಿದ್ದಲದೇ ಈ ವಿಷಯವನ್ನು ಯಾರಿಗಾದರೂ ಹೇಳಿದರೆ ನಿನ್ನ ತಾಯಿಗೂ ಟಾರ್ಚರ್ ಮಾಡ್ತೀನಿ, ನಿನ್ನನ್ನು ಸಾಯಿಸ್ತಿನಿ ಅಂತಾ ಬೆದರಿಸಿದ್ದು, ಆಗಿನಿಂದಲು ನಿರಂತರವಾಗಿ ಮನೆಯಲ್ಲಿ ಒಬ್ಬಳೆ ಇದ್ದಾಗ ಬಲವಂತವಾಗಿ ಅತ್ಯಾಚಾರ ಮಾಡುತ್ತಾ ಬಂದಿರುತ್ತಾನೆ.

ಅಲ್ಲದೇ ಕಳೆದ ವರ್ಷ ಆರೋಪಿ ಅಮರೇಶ್ ಈತನ ಸ್ನೇಹಿತನಾದ ಆರೋಪಿ ಸೀನು ಎರಡು ಸಲ ಮನೆಗೆ ಕರೆದುಕೊಂಡು ಬಂದು ಆತನೊಂದಿಗೆ ಮಲಗಬೇಕು ಎಂದು ಬೆದರಿಸಿದ್ದು, ಆರೋಪಿ ಸೀನು ಬಾಲಕಿಯೊಂದಿಗೆ ಎರಡು ಸಲ ಬಲವಂತವಾಗಿ ಅತ್ಯಾಚಾರ ಮಾಡಿರುತ್ತಾನೆ ನಂತರ ಫೆಬ್ರುವರಿ ತಿಂಗಳಲ್ಲಿ ಆರೋಪಿ ಅಮರೇಶ್ ಬಾಲಕಿಯೊಂದಿಗೆ ದೈಹಿಕ ಅತ್ಯಾಚಾರ ಮಾಡಲು ಪ್ರಾರಂಭಿ ಸಿದ್ದು. ದಿನಾಂಕ 16.04.2026 ರಂದು ಸಂಜೆ 5.00 ಗಂಟೆ ಸುಮಾರಿಗೆ ಮನೆಯಲ್ಲಿ ಯಾರು ಇಲ್ಲದೇ ಇರುವುದನ್ನು ನೋಡಿ ಬಾಲಕಿ ಯೊಂದಿಗೆ ಬಲವಂತವಾಗಿ ಅತ್ಯಾಚಾರ ಮಾಡಿದು, ಆರೋಪಿ ಸೀನು ಬಾಲಕಿಯು ಪರಿಶಿಷ್ಟ ಜಾತಿಗೆ ಸೇರಿದ ಅಪ್ರಾಪ್ತ ವಯಸ್ಸಿನವಳೆಂದು ತಿಳಿದಿದ್ದು ಬಾಲಕಿ ಯೊಂದಿಗೆ ಬಲವಂತವಾಗಿ ಅತ್ಯಾಚಾರ ಮಾಡಿದ್ದೂ ಈ ವಿಷಯ ತಾಯಿಯ ಬಳಿ ತಿಳಿಸಿದ್ದು ಬಾಲಕಿಯ ತಾಯಿಯು ತನ್ನ ಮಗಳ ಭವಿಷ್ಯದ ದೃಷ್ಟಿಯಿಂದ ಭಯಗೊಂಡು ಮನೆಯಲ್ಲಿ ಹಿರಿಯರ ಜೊತೆ ಮಾತನಾಡಿ ವಿಚಾರ ಮಾಡಿಕೊಂಡು ತಡವಾಗಿ ದಿನಾಂಕ 12-05-2026ರಂದು ದೂರು ನೀಡಿರುತ್ತಾರೆ

ದೂರಿನ ಆದರದ ಮೇಲೆ ಲಿಂಗಸುಗೂರ ಸಿಪಿಐ ಹೊಸಕೇರಪ್ಪ ಇಬ್ಬರು ಆರೋಪಿಗಳನ್ನು ಬಂಧಿಸಿ ಪೋಕ್ಸೋ ಪ್ರಕರಣ ದಾಖಲಿಸಿ ನ್ಯಾಯಾಲಯದ ಬಂಧನಕ್ಕೆ ನೀಡಿದ್ದಾರೆಂದು ತಿಳಿದು ಬಂದಿದೆ .

ಡಾ.ಮಲ್ಲಿಕಾರ್ಜುನ ಸ್ವಾಮಿ ಹಾಗೂ ಡಾ. ಚನ್ನಬಸವ ಸ್ವಾಮಿಗಳಿಗೆ ಗೌರವ

ಲಿಂಗಸೂಗೂರು, ಮೇ.17-

ಮಾನವ ಹಕ್ಕುಗಳ ಸಂರಕ್ಷಣೆ ಹಾಗೂ ಭ್ರಷ್ಟಾಚಾರ ನಿರ್ಮೂಲನಾ ಸಂಸ್ಥೆ ಲಿಂಗಸುಗೂರು ತಾಲೂಕ ಘಟಕದ ಅಧ್ಯಕ್ಷರಾದ ವಿಜಯಲಕ್ಷ್ಮೀ ಹಿರೇಮಠ ಇವರು ತಮ್ಮ ಲಿಂಗಸೂಗೂರಿನ ನಿವಾಸದಲ್ಲಿ ಸಿಂಧನೂರಿನ ಕಾರುಣ್ಯಾಶ್ರಮದ ಸದಸ್ಯರಾದ ಡಾ.ಮಲ್ಲಿಕಾರ್ಜುನ ಸ್ವಾಮಿ ಹಿರೇಮಠ ಕರಡಕಲ್ ಹಾಗೂ ಡಾ. ಚನ್ನಬಸವ ಸ್ವಾಮಿ ಹಿರೇಮಠ ಇವರುಗಳನ್ನು ಸನ್ಮಾನಿಸಿ ಗೌರವಿಸಿ ಸತ್ಕರಿಸಿದರು.

ನಂತರ ವಿಜಯಲಕ್ಷ್ಮಿ ಹಿರೇಮಠ ಮಾತನಾಡಿ ಸಿಂಧನೂರಿನ ಕರುಣೆಯ ಕಾರುಣ್ಯ ಆಶ್ರಮದ ಇವರುಗಳನ್ನು ಪಿತಾಮಹಗಳೆಂದು ಕರೆಯಬಹುದು. ಡಾ. ಮಲ್ಲಿಕಾರ್ಜುನ ಸ್ವಾಮಿ ಹಿರೇಮಠ ಅವರು ಅಂಗವಿಕಲರಾಗಿ ನ್ಯೂನತೆಯಿಂದ ಬಳಲುತ್ತಿದ್ದರೂ ಸಹ ಸಮಾಜಕ್ಕಾಗಿ ತಮ್ಮನ್ನು ತಾವು ಅರ್ಪಿಸಿಕೊಂಡಿರುವುದು ನಮ್ಮ ಲಿಂಗಸೂಗೂರಿಗೆ ಗೌರವ ತಂದು ಕೊಟ್ಟಿದೆ. ಇವರ ಆದರ್ಶವನ್ನು ನಾವು ನೀವೆಲ್ಲರೂ ಪಾಲಿಸುವ ಮೂಲಕ ನಮ್ಮ ಹೆತ್ತವರ ಹೆಸರು ತರಬೇಕು. ಕಾರುಣ್ಯ ಕುಟುಂಬದ ಕಣ್ಣಾದ ಇವರುಗಳು ಸಮಾಜದ ಆಸ್ತಿಯಾಗಿದ್ದಾರೆ. ಮತ್ತು ವಿಶೇಷವಾಗಿ ಇದೇ ತಿಂಗಳು 24ನೇ ದಿನಾಂಕದಂದು ಗೋವಾ ರಾಜ್ಯದ ಪಣಜಿ ನಗರದಲ್ಲಿ ಅಶೋಕ ಪ್ಲಾಜಾ ಹೋಟೆಲ್ ನಲ್ಲಿ ಡಾ. ಮಲ್ಲಿಕಾರ್ಜುನ ಸ್ವಾಮಿ ಹಿರೇಮಠ ಅವರಿಗೆ ಕದಂಬ ಫೌಂಡೇಶನ್ ಗೋವಾ ಹಾಗೂ ಸುವರ್ಣ ಫೋಕಸ್ ಕನ್ನಡ ದಿನಪತ್ರಿಕೆಯ ವಾರ್ಷಿಕೋತ್ಸವ ಸಮಾರಂಭ ಕಾರ್ಯಕ್ರಮದಲ್ಲಿ ಬುದ್ಧ ಬಸವ ಅಂಬೇಡ್ಕರ್ ಜಯಂತಿ ಅಂಗವಾಗಿ ಗೋಲ್ಡನ್ ಮ್ಯಾನ್ ಆಫ್ ದಿ ಅವಾರ್ಡ್ ಎನ್ನುವ ಶ್ರೇಷ್ಠ ಪ್ರಶಸ್ತಿ ಸ್ವೀಕರಿಸುತ್ತಿರುವ ಹಿನ್ನೆಲೆಯಲ್ಲಿ ನಾವೆಲ್ಲರೂ ಕೂಡ ಹರಸಿ ಹಾರೈಸುತ್ತೇವೆ ಎಂದು ಮುಂಚಿತವಾಗಿಯೇ ಶುಭ ಕೋರಿದರು.



ಈ ಸಂದರ್ಭದಲ್ಲಿ ಆಶ್ರಮದ ಕಾರ್ಯಾಧ್ಯಕ್ಷರಾದ ಡಾ.ಚನ್ನಬಸವಸ್ವಾಮಿ ಹಿರೇಮಠ. ಸಾಗರ್ ಹಿರೇಮಠ ಶರಣಪ್ಪ ನಾಯಕ ಕಸಬಾ ಲಿಂಗಸೂಗೂರು. ಆಶ್ರಮದ ಸಿಬ್ಬಂದಿಯಾದ ಮರಿಯಪ್ಪ ನಾಯಕ. ಮತ್ತು ವೀರೇಶ ಟಿ. ಸಿ. ಸ್ಟುಡಿಯೋ ಲಿಂಗಸೂಗೂರು ಇವರುಗಳು ಉಪಸ್ಥಿತರಿದ್ದರು

ಶೇ.100 ರಷ್ಟು ಡೆಂಗ್ಯೂ, ಮಲೇರಿಯಾ ಮುಕ್ತ ಜಿಲ್ಲೆಯಾಗಲಿ : ಡಿಸಿ ಕವಿತಾ ಎಸ್.ಮನ್ನಿಕೇರಿ



ವಿಜಯನಗರ ,ಮೇ.17-

ಜಿಲ್ಲೆಯಲ್ಲಿ ಡೆಂಗ್ಯೂ ಮತ್ತು ಮಲೇರಿಯಾ, ಕಾಲರಾದಂತಹ ಮಾರಣಾಂತಿಕ ರೋಗಗಳಿಂದ ಶೇ.100 ರಷ್ಟು ಮುಕ್ತ ಜಿಲ್ಲೆಯಾಗಿಸಲು ಅಧಿಕಾರಿಗಳು ಅಗತ್ಯ ಮುಂಜಾಗ್ರತಾ ಕ್ರಮವಹಿಸಿ ಎಚ್ಚರಿಕೆಯಿಂದ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ಕಡಕ್ ಸೂಚನೆ ನೀಡಿದರು.

ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಅಂತರ ಇಲಾಖೆ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಇನ್ನೇನು ಮುಂಗಾರು ಮಳೆ ಆರಂಭವಾಗುತ್ತಿದ್ದು, ಕಲುಷಿತ ನೀರು, ಹವಾಮಾನ ವೈಪರೀತ್ಯದಿಂದಾಗಿ ಡೆಂಗ್ಯೂ, ಮಲೇರಿಯಾ, ಕಾಲರಾದಂತಹ ಸಾಂಕ್ರಾಮಿಕ ರೋಗಗಳ ಉಲ್ಬಣಗೊಳ್ಳುವ ಸಾಧ್ಯತೆ ಹೆಚ್ಚಿದೆ. ಆದ್ದರಿಂದ ಈ ಬಗ್ಗೆ ಸಾರ್ವಜನಿಕರಿಗೆ ಸ್ಥಳೀಯ ಆಡಳಿತ ಸಂಸ್ಥೆ ಸ್ವಚ್ಛ ಹಾಗೂ ಶುದ್ಧ ಕುಡಿಯುವ ನೀರು ಪೂರೈಸಬೇಕು. ಒಂದು ವೇಳೆ ಪೈಪ್‌ಲೈನ್ ದುರಸ್ಥಿ ಇನ್ನಿತರೆ ಕಾರಣಗಳಿಂದ ಕಲುಷಿತ ನೀರು ಸರಬರಾಜಾಗಿ ಸಾರ್ವಜನಿಕರ ಆರೋಗ್ಯದಲ್ಲಿ ಏರುಪೇರು ಉಂಟಾದಲ್ಲಿ ಸಂಬಂಧಪಟ್ಟ ಅಧಿಕಾರಿಗಳನ್ನು ನೇರ ಹೊಣೆಗಾರರನ್ನಾಗಿಸುವುದಲ್ಲದೇ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಹಾಗೆಯೇ ಮುಂಗಾರು ಸಮೀಪಿಸುತ್ತಿರುವುದರಿಂದ ಸಾಂಕ್ರಾಮಿಕ ರೋಗಗಳು ಹರಡುವ ಸಂಭವ ಹೆಚ್ಚಿರುತ್ತದೆ. ಆದ್ದರಿಂದ ನಗರ, ಗ್ರಾಮೀಣ ಪರದೇಶಗಳಲ್ಲಿ ಡೆಂಗ್ಯೂ, ಕಾಲರಾ, ಮಲೇರಿಯಾ ಹರಡದಂತೆ ಅಗತ್ಯ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳಬೇಕು. ಸ್ಥಳೀಯ ಆಡಳಿತ ಸಂಸ್ಥೆಯ ಅಧಿಕಾರಿಗಳು ಶುದ್ಧ ಕುಡಿಯುವ ನೀರು ಪೂರೈಕೆ ಹಾಗೂ ಚರಮಡಿ ಸ್ವಚ್ಚತೆಗೆ ಆದ್ಯತೆ ನೀಡಬೇಕು. ಶಾಲಾ ಕಾಲೇಜುಗಳಲ್ಲಿ ಮುಂಜಾನೆ ಪ್ರಾರ್ಥನೆ ನಂತರ ಪ್ರತಿದಿನ ಈ ಕಾಯಿಲೆಗಳಿಂದಾಗುವ ದುಷ್ಪರಿಣಾಮದ ಬಗ್ಗೆ ತಿಳಿ ಹೇಳಬೇಕು. ಸಾಂಕ್ರಾಮಿಕ ರೋಗಗಳ ನಿಯಂತ್ರಣದಲ್ಲಿ ಇಲಾಖೆಗಳ ಪಾತ್ರ ಅಷ್ಟೇ ಅಲ್ಲದೇ ಸಾರ್ವಜನಿಕರ ಸಹಕಾರವೂ ಬೇಕು. ಈ ನಿಟ್ಟಿನಲ್ಲಿ ಸಾರ್ವಜನಿಕರು ತಮ್ಮ ಮನೆಗಳ ಸುತ್ತ ಮುತ್ತ ನೀರು ನಿಲ್ಲದಂತೆ ಎಚ್ಚರವಹಿಸಬೇಕು. ಕುದಿಸಿ ಆರಿಸಿದ ನೀರು ಕುಡಿಯಬೇಕು. ಯಾವುದೇ ರೀತಿಯ ಆರೋಗ್ಯ ಸಮಸ್ಯೆ ಕಂಡುಬಂದಲ್ಲಿ ತಕ್ಷಣ ಹತ್ತಿರದ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ ಚಿಕಿತ್ಸೆ ಪಡೆಯಬೇಕು. ಮಳೆಗಾಲ ಆರಂಭವಾಗುವ ಮುನ್ನವೇ ಆಶಾ ಹಾಗೂ ಆರೋಗ್ಯ ಇಲಾಖೆ ಸಿಬ್ಬಂದಿ ಸಹಭಾಗಿತ್ವದೊಂದಿಗೆ ಮನೆ-ಮನೆ ಭೇಟಿ ನೀಡಿ ಸೊಳ್ಳೆ ಉತ್ಪತ್ತಿ ತಾಣ ಗುರುತಿಸಿ ಲಾರ್ವಾ ಉತ್ಪತ್ತಿಯಾಗದಂತೆ ತಡೆಯಬೇಕು. ಅಗತ್ಯವಿದ್ದಲ್ಲಿ ಫಾಗಿಂಗ್ ಮಾಡುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ.

ಡೆಂಗ್ಯೂ ನಿಯಂತ್ರಣದಲ್ಲಿ ವಿಜಯನಗರ ರಾಜ್ಯಕ್ಕೆ ಮಾದರಿ: ಕಳೆದ ವರ್ಷಗಳಿಗೆ ಹೋಲಿಸಿದರೆ ಜಿಲ್ಲೆಯಲ್ಲಿ ಡೆಂಗ್ಯೂ ಪ್ರಕರಣಗಳ ಸಂಖ್ಯೆ ಗಣನೀಯವಾಗಿ ಕುಸಿದಿದೆ. 2023-24ರಲ್ಲಿ 323 ರಷ್ಟಿದ್ದ ಪ್ರಕರಣಗಳು, ಪ್ರಸಕ್ತ ಸಾಲಿನಲ್ಲಿ ಕೇವಲ 14ಕ್ಕೆ ಇಳಿಕೆಯಾಗಿವೆ. ಆರೋಗ್ಯ ಇಲಾಖೆ ಕೈಗೊಂಡ ಕಟ್ಟುನಿಟ್ಟಿನ ಮುಂಜಾಗ್ರತಾ ಕ್ರಮ ಮತ್ತು ಸಾಧನೆಯಿಂದ ಇಡೀ ರಾಜ್ಯಕ್ಕೆ ಮಾದರಿಯಾಗಿದೆ ಎಂದು ಶ್ಲಾಘಿಸಿದರು.

ಹೆಚ್‌ಪಿವಿ ಲಸಿಕೆಗೆ ಸಹಕರಿಸಿ:

ಜಿಲ್ಲಾದ್ಯಂತ 15 ವರ್ಷದೊಳಗಿನ (ವಿಶೇಷವಾಗಿ 8 ಮತ್ತು 9ನೇ ತರಗತಿಯ) ಒಟ್ಟು 15,000 ಮಕ್ಕಳನ್ನು ತಲುಪುವ ಗುರಿ ಹೊಂದಲಾಗಿದ್ದು, ಪ್ರಸ್ತುತ ಶೇ.35 ರಷ್ಟು ಪ್ರಗತಿಯಾಗಿದೆ. ಬಾಕಿ ಉಳಿದಿರುವ ಗುರಿಯನ್ನು ವ್ಯವಸ್ಥಿತವಾಗಿ ತಲುಪಲು ಪ್ರತಿ ಪ್ರಾಥಮಿಕ ಆರೋಗ್ಯ ಕೇಂದ್ರ ವ್ಯಾಪ್ತಿಯಲ್ಲಿ ಬರುವ ಗ್ರಾಮ ಅಥವಾ ವಾರ್ಡ್ವಾರು ಲಸಿಕಾ ಅಭಿಯಾನ ಕೈಗೊಳ್ಳಬೇಕು. ಈ ಬಗ್ಗೆ ಪೋಷಕರಲ್ಲಿ ಭೀತಿಯ ಭಾವನೆ ಇದ್ದು ಸಹಕರಿಸುತ್ತಿಲ್ಲ. ಆದ್ದರಿಂದ ಹದಿಹರೆಯದ ಮಕ್ಕಳಲ್ಲಿ ಉಂಟಾಗುವ ಕ್ಯಾನ್ಸರ್‌ನಂತಹ ಮಾರಣಾಂತಿಕ ಕಾಯಿಲೆಯಿಂದಾಗುವ ಪರಿಣಾಮವನ್ನು ಪೋಷಕರಿಗೆ ಅರ್ಥೈಸಬೇಕಿದೆ ಎಂದರು.

ವಿಶ್ವಾಸ ಮೂಡಿಸಲು ವಿನೂತನ ಪ್ರಯೋಗ: ನಗರ ಸೇರಿದಂತೆ ಕೆಲವು ಗ್ರಾಮೀಣ ಭಾಗದಲ್ಲಿ ಲಸಿಕೆ ಪಡೆಯಲು ಕೆಲವು ಸಮುದಾಯದ ಪೋಷಕರು ಹಿಂಜರಿಯುತ್ತಿರುವ ಬಗ್ಗೆ ಮಾಹಿತಿ ಇದೆ. ಆದ್ದರಿಂದ ಅಂತಹ ಪ್ರದೇಶಗಳಲ್ಲಿ ಜಾಗೃತಿ ಮೂಡಿಸಲು ವಿನೂತನ ಕ್ರಮ ಕೈಗೊಳ್ಳಲಾಗಿದೆ. ಲಸಿಕೆ ಪಡೆದ ಆಯಾ ಸಮುದಾಯದ ಮಕ್ಕಳ ಮೂಲಕವೇ ಅವರದ್ದೇ ಆದ ಸ್ಥಳೀಯ ಭಾಷೆಯಲ್ಲಿ ಕಿರು ವಿಡಿಯೋ ಸಂದೇಶಗಳನ್ನು ಸಿದ್ಧಪಡಿಸಿ ಪೋಷಕರಲ್ಲಿನ ಭೀತಿ ನಿವಾರಿಸಲಾಗುತ್ತಿದೆ. ಈ ಮೂಲಕ ಲಸಿಕಾ ಅಭಿಯಾನ ಶೇ.100 ಗುರಿ ತಲುಪಲು ಸಾಧ್ಯ ಎಂದು ಆರ್‌ಸಿಹೆಚ್ ಅಧಿಕಾರಿ ಜಂಬಯ್ಯ ಅಭಿಪ್ರಾಯ ವ್ಯಕ್ತಪಡಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಸಿಇಓ ನೋಂಗ್ಜಾಯ್ ಮಹಮ್ಮದ್ ಅಲಿ ಅಕ್ರಂ ಷಾ, ಡಿಹೆಚ್‌ಓ ಡಾ.ಎಲ್.ಆರ್.ಶಂಕರ್ ನಾಯ್ಕ್, ಆರ್‌ಸಿಹೆಚ್ ಅಧಿಕಾರಿ ಡಾ.ಜಂಬಯ್ಯ, ಪಶುಸಂಗೋಪನೆ ಇಲಾಖೆ ಅಧಿಕಾರಿ ರವಿ ಜಿಲ್ಲಾ ಅನುಷ್ಠಾನಾಧಿಕಾರಿ ಷಣ್ಮುಖ ನಾಯ್ಕ ಹಾಗೂ ವಿವಿಧ ತಾಲೂಕುಗಳ ಆರೋಗ್ಯಾಧಿಕಾರಿಗಳು ಉಪಸ್ಥಿತರಿದ್ದರು.



ಬಾದಾಮಿ ಅಮವಾಸ್ಯೆ ನಿಮಿತ್ತ ಈರಣ್ಣ ಸ್ವಾಮಿ ದೇವಸ್ಥಾನದಲ್ಲಿ ಅನ್ನದಾಸೋಹ

ಸಿರುಗುಪ್ಪ ,ಮೇ.17-

ನಗರದ 19ನೇ ವಾರ್ಡಿನಲ್ಲಿರುವ ಶ್ರೀ ಉರುಕುಂದಿ ಈರಣ್ಣ ಸ್ವಾಮಿ ದೇವಸ್ಥಾನದಲ್ಲಿ ಬಾದಾಮಿ ಅಮವಾಸ್ಯೆ ನಿಮಿತ್ತ ವೈಶ್ಯ ಬ್ಯಾಂಕಿನ ನಿವೃತ್ತ ವ್ಯವಸ್ಥಾಪಕ ಯು.ಈರಯ್ಯ ಶೆಟ್ಟಿ ಅವರ ಕುಟುಂಬದಿಂದ ಅನ್ನದಾಸೋಹ ನೆರವೇರಿತು. ದೇವಸ್ಥಾನ ಸಮಿತಿಯಿಂದ ದಾನಿಗಳನ್ನು ಸನ್ಮಾನಿಸಲಾಯಿತು.

ಬಾದಾಮಿ ಅಮವಾಸ್ಯೆ ನಿಮಿತ್ತ ದೇವಸ್ಥಾನದಲ್ಲಿ ಪಂಚಾಭಿಷೇಕ, ವಿವಿಧ ಫಲಪುಷ್ಪಗಳ ಅಲಂಕಾರ, ಮಹಾಮಂಗಳಾರತಿ, ಹಾಗೂ ಪಲ್ಲಕ್ಕಿ ಸೇವೆ ಜರುಗಿದ್ದು, ಹಲವಾರು ಭಕ್ತರು ಭಾಗಿಯಾಗಿ ದೇವರ ಹರಕೆ ತೀರಿಸಿದರು.

ದಾಸೋಹ ದಾನಿಗಳಾದ ಯು.ಈರಯ್ಯ ಶೆಟ್ಟಿ, ಅವರು ಮಾತನಾಡಿ ಪ್ರತಿ ಅಮವಾಸ್ಯೆಯು ಇಲ್ಲಿ ದಾನಿಗಳ ನೆರವಿನಿಂದ ಅನ್ನದಾಸೋಹ ಜರುಗಲಿದ್ದು, ಈ ಸ್ವಾಮಿಯ ಅನುಗ್ರಹದಿಂದ ನಮ್ಮ ಕುಟುಂಬಕ್ಕೆ ಒಳಿತಾಗಿದ್ದು, ಇಂದು ನಮ್ಮ ಕುಟುಂಬ ಸಮೇತ ಬಂದು ಪಲ್ಲಕ್ಕಿ ಸೇವೆ, ದಾಸೋಹ ಸೇವೆ ಮಾಡಿರುವುದಾಗಿ ತಿಳಿಸಿದರು.

ರಂಗನಾಥ ಶೆಟ್ಟಿ ಅವರು ಮಾತನಾಡಿ ಅಪಾರ ಭಕ್ತವೃಂದವನ್ನು ಹೊಂದಿರುವ ಶ್ರೀ ಈರಣ್ಣ ಸ್ವಾಮಿಯ ಸೇವೆಗೈಯಲೆಂದು ನಗರದ ವಿವಿಧ ವಾರ್ಡ್‌ಗಳಿಂದ ಬಂದು ತಮ್ಮ ಕೈಲಾದ ಸೇವೆಯಲ್ಲಿ ಭಾಗಿಯಾಗುತ್ತಾರೆಂದರು.

ಯಾರಾದರೂ ಮುಂದಿನ ಅಮವಾಸ್ಯೆಗೆ ದಾಸೋಹ ಮಾಡುವ ಇಚ್ಚೆಯುಳ್ಳ ಭಕ್ತರು ಮೊದಲೇ ತಿಳಿಸಿದಲ್ಲಿ ಅವರ ಸೇವೆಗೆ ಅನುವು ಮಾಡಿಕೊಡಲಾಗುವುದೆಂದು ಅರ್ಚಕ ಶರಣಯ್ಯಸ್ವಾಮಿ ತಿಳಿಸಿದರು.

ಇದೇ ವೇಳೆ ದೇವಸ್ಥಾನ ಅಭಿವೃದ್ದಿ ಟ್ರಸ್ಟಿನ ಅಧ್ಯಕ್ಷ ಬಿ.ಸುರೇಶರೆಡ್ಡಿ, ಉಪಾಧ್ಯಕ್ಷ ಎಳ್ಳಾರ್ತಿ ವೀರೇಶ, ಪದಾಧಿಕಾರಿಗಳಾದ ಮಲ್ಲಿಕಾರ್ಜುನ, ಬದ್ರಿನಾಥ, ಗುರುರಾಜ, ಟಿ.ಎಮ್.ಆರ್.ಶ್ರೀನಿವಾಸ, ಇನ್ನಿತರ ದಾನಿಗಳು ಹಾಗೂ ಭಕ್ತರು ಇದ್ದರು.

16-ಸಿರುಗುಪ್ಪ-1 : ಸಿರುಗುಪ್ಪ ನಗರದ ರಾಜೀವ್ ಗಾಂಧೀ ಆಂಗ್ಲ ಮಾದ್ಯಮ ಶಾಲೆಯ ಹತ್ತಿರದಲ್ಲಿನ ಶ್ರೀ ಉರುಕುಂದಿ ಈರಣ್ಣ ಸ್ವಾಮಿ ದೇವಸ್ಥಾನದಲ್ಲಿ ಅಕ್ಷತದಿಗಿ ಅಮವಾಸ್ಯೆ ನಿಮಿತ್ತ ಅನ್ನದಾಸೋಹ ಜರುಗಿತು.



ಡೆಂಗ್ಯೂ ನಿಯಂತ್ರಣಕ್ಕೆ ಪ್ರತಿಯೊಬ್ಬರ ಸಹಭಾಗಿತ್ವ ಅಗತ್ಯ : ಡಾ.ಯಲ್ಲಾ ರಮೇಶಬಾಬು ಕರೆ

ಬಳ್ಳಾರಿ,ಮೇ 17-

ಮನೆಯಲ್ಲಿ ಬಳಕೆಗಾಗಿ ಸಂಗ್ರಹಿಸುವ ನೀರಿನ ಪರಿಕರಗಳನ್ನು ಸರಿಯಾಗಿ ಮುಚ್ಚದಿದ್ದರೆ, ಅಂತಹ ನೀರಿನಲ್ಲಿ ಈಡೀಸ್ ಸೊಳ್ಳೆಗಳು ಮೊಟ್ಟೆಯಿಟ್ಟು ಸಂತತಿ ವೃದ್ಧಿಸುತ್ತವೆ. ಹಾಗಾಗಿ ಸಾರ್ವಜನಿಕರು ಮನೆಯ ಸುತ್ತಮುತ್ತ ಸ್ವಚ್ಛತೆ ಕಾಪಾಡುವುದರೊಂದಿಗೆ, ಇಲಾಖೆಯ ಡೆಂಗ್ಯೂ ನಿಯಂತ್ರಣ ಕಾರ್ಯಕ್ಕೆ ಕೈಜೋಡಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಯಲ್ಲಾ ರಮೇಶಬಾಬು ಅವರು ಕರೆ ನೀಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ವಿಭಾಗ ಹಾಗೂ ಕೌಲ್‌ಬಜಾರ್‌ನ ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ಸಹಯೋಗದಲ್ಲಿ ಶನಿವಾರ ಹಮ್ಮಿಕೊಳ್ಳಲಾಗಿದ್ದ 'ರಾಷ್ಟ್ರೀಯ ಡೆಂಗ್ಯೂ ದಿನಾಚರಣೆ ಜಾಗೃತಿ ಜಾಥಾ' ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಮನೆಯ ಒಳಗಿನ ಸ್ವಚ್ಛತೆಗೆ ನೀಡುವಷ್ಟೇ ಮಹತ್ವವನ್ನು ಹೊರಗಿನ ಸ್ವಚ್ಛತೆಗೂ ನೀಡಬೇಕು. ನೀರು ತುಂಬುವ ಪರಿಕರಗಳನ್ನು ವಾರಕ್ಕೊಮ್ಮೆ ತಿಕ್ಕಿ ತೊಳೆದು, ಒಣಗಿಸಿ ನಂತರ ನೀರು ತುಂಬಿ ಸರಿಯಾಗಿ ಮುಚ್ಚಳ ಮುಚ್ಚಬೇಕು. ಮನೆಯ ಹೊರಗೆ ಅನಗತ್ಯವಾಗಿ ಮಳೆ ನೀರು ನಿಲ್ಲುವ ಬೀಸಾಡಿದ ಟೈರ್, ತಗಡಿನ ಟಿನ್, ಪ್ಲಾಸ್ಟಿಕ್ ಕಪ್, ಹೂವಿನ ಕುಂಡ ಹಾಗೂ ಫ್ರಿಡ್ಜ್‌ನ ಹಿಂಭಾಗದಲ್ಲಿ 7 ದಿನಗಳಿಗಿಂತ ಹೆಚ್ಚು ಕಾಲ ನೀರು ನಿಲ್ಲದಂತೆ ಎಚ್ಚರ ವಹಿಸಬೇಕು. ಇದರಿಂದ ಡೆಂಗ್ಯೂ ಮತ್ತು ಚಿಕೂನ್‌ಗುನ್ಯಾ ಹರಡುವ 'ಈಡೀಸ್ ಇಜಿಪ್ಟಿ' ಸೊಳ್ಳೆಗಳ ಮರಿ ಉತ್ಪತ್ತಿಯಾಗುವುದನ್ನು ತಡೆಯಬಹುದು ಎಂದರು. ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಅಧಿಕಾರಿ ಡಾ.ಮರಿಯಂಬಿ ವಿ.ಕೆ ಅವರು ಮಾತನಾಡಿ, 'ಡೆಂಗ್ಯೂ ನಿಯಂತ್ರಣಕ್ಕಾಗಿ ಸಮುದಾಯದ ಪಾಲ್ಗೊಳ್ಳುವಿಕೆ: ಪರಿಶೀಲಿಸಿ, ಸ್ವಚ್ಛಗೊಳಿಸಿ ಹಾಗೂ ಮುಚ್ಚಿಡಿ' ಎಂಬುದು ಈ ವರ್ಷದ ಘೋಷವಾಕ್ಯವಾಗಿದೆ ಎಂದು ತಿಳಿಸಿದರು.

ಜ್ವರ, ಕಣ್ಣು ಕೆಂಪಾಗುವುದು, ಕಣ್ಣಿನ ಹಿಂಭಾಗದಲ್ಲಿ ನೋವು, ವಾಂತಿ, ಕಾರಣವಿಲ್ಲದೆ ಮೈ ತುರಿಕೆ, ತಲೆನೋವು, ಮೈಮೇಲೆ ಗಂಧೆಗಳು (ದದ್ದುಗಳು), ಕೀಲು ಮತ್ತು ಸ್ನಾಯು ನೋವು ಕಂಡುಬಂದಲ್ಲಿ ತಕ್ಷಣವೇ ಹತ್ತಿರದ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ ವೈದ್ಯರ ಸಲಹೆ ಪಡೆಯಬೇಕು. ಹೆಚ್ಚು ದಿನಗಳ ಕಾಲ ನೀರು ಸಂಗ್ರಹವಿರುವ ಸ್ಥಳಗಳಲ್ಲಿ ಸೊಳ್ಳೆ ಲಾರ್ವಾಗಳನ್ನು ತಿನ್ನುವ 'ಗಪ್ಪಿ' ಮತ್ತು 'ಗಾಂಬೋಷಿಯಾ' ಮೀನುಗಳನ್ನು ಬಿಡಲು ಅವಕಾಶವಿದ್ದು, ಎಲ್ಲಾ ಆರೋಗ್ಯ ಕೇಂದ್ರಗಳಲ್ಲಿ ಇವುಗಳನ್ನು ಉಚಿತವಾಗಿ ಪಡೆದುಕೊಳ್ಳಬಹುದು ಎಂದು ಮಾಹಿತಿ ನೀಡಿದರು.

ಈ ವೇಳೆ ಮಹಾನಗರ ಪಾಲಿಕೆಯ ಸದಸ್ಯರಾದ ಡಿ.ಸುಕುಂ, ಟಿ.ರಿಯಾಜ್ ಅಹಮ್ಮದ್, ವೈದ್ಯಾಧಿಕಾರಿ ಡಾ.ರೇವಣಸಿದ್ದಪ್ಪ, ಎನ್‌ವಿಬಿಡಿಸಿಪಿ ಕನ್ಸಲ್ಟಂಟ್ ಪ್ರತಾಪ್, ಪ್ರಭಾರಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಖುರ್ಶಿದ್ ಬೇಗಮ್, ಜಿಲ್ಲಾ ಮತ್ತು ತಾಲೂಕು ಮಟ್ಟದ ಮೇಲ್ವಿಚಾರಕರು, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳು, ಆರೋಗ್ಯ ನಿರೀಕ್ಷಕರು, ಆಶಾ ಕಾರ್ಯಕರ್ತೆಯರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ತೋಟಗಾರಿಕೆ ವಿವಿಯ ಉದ್ಯಾನಗಿರಿಯಲ್ಲಿ 3 ದಿನಗಳ ಕಾಲ ಮಾವು ಮೇಳಕ್ಕೆ ಶಾಸಕ ನಿರಾಣಿ ಚಾಲನೆ



ಬಾಗಲಕೋಟ, ಮೇ.17-

ನವನಗರದ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲದ ಉದ್ಯಾನಗಿರಿಯಲ್ಲಿ ಮೂರು ದಿನಗಳ ಕಾಲ ಹಮ್ಮಿಕೊಂಡ ಮಾವು ಮೇಳಕ್ಕೆ ವಿಧಾನ ಪರಿಷತ್ ಶಾಸಕ ಹನಮಂತ ನಿರಾಣಿ ಶನಿವಾರ ಚಾಲನೆ ನೀಡಿದರು. ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ತೋಟಗಾರಿಕೆ ಇಲಾಖೆ, ಸಿಬಿಬಿಓ ಜೇನು ರೈತ ಉತ್ಪಾದಕರ ಸಂಘ, ಭಾರತೀಯ ತೋಟಗಾರಿಕೆ ಸಂಶೋಧನಾ ಸಂಸ್ಥೆ ಹಾಗೂ ಡಾ.ದಂಡಿನ ಶಿಕ್ಷಣ ಮತ್ತು ಸಂಶೋಧನೆ ಪ್ರತಿಷ್ಠಾನದ ಸಹಯೋಗದಲ್ಲಿ ಹಮ್ಮಿಕೊಂಡ ಮಾವು ಮೇಳಕ್ಕೆ ಚಾಲನೆ ನೀಡಿ, ವಿವಿಧ ಮಾವು ತಳಿಗಳನ್ನು ವೀಕ್ಷಣೆ ಮಾಡಿ ನಂತರ ಮಾತನಾಡಿದ ಅವರು ಮಾವು ಬೆಳೆಗಾರರಿಗೆ ಉತ್ತೇಜನ ನೀಡುವುದು ಹಾಗೂ ಗುಣಮಟ್ಟದ ಹಣ್ಣುಗಳನ್ನು ನೇರವಾಗಿ ಗ್ರಾಹಕರಿಗೆ ತಲುಪಿಸುವ ಉದ್ದೇಶದಿಂದ ಮಾವು ಮೇಳವನ್ನು ಆಯೋಜನೆ ಮಾಡಲಾಗಿದೆ ಎಂದರು.

ಉತ್ತರ ಕರ್ನಾಟಕ ಭಾಗದಲ್ಲಿ ಮಾವು ಬೆಳೆಗೆ ಉತ್ತಮ ಅವಕಾಶಗಳಿದ್ದು, ರೈತರು ಆಧುನಿಕ ತಂತ್ರಜ್ಞಾನ ಅಳವಡಿಸಿಕೊಂಡು ಗುಣಮಟ್ಟದ ಉತ್ಪಾದನೆಗೆ ಹೆಚ್ಚು ಒತ್ತು ನೀಡಬೇಕಿದೆ. ಈ ನಿಟ್ಟಿನಲ್ಲಿ ತೋವಿವಿಯು ಮುಂದಿನ ದಿನಮಾನಗಳಲ್ಲಿ ಮಾವು ನಿಗಮವನ್ನು ಸ್ಥಾಪಿಸುವ ಕೆಲಸ ಮಾಡಬೇಕಿದೆ. ವಿಶ್ವವಿದ್ಯಾಲಯದಲ್ಲಿ ಮಾವಿನ ತಳಿಗಳ ತಂತ್ರಜ್ಞಾನವನ್ನು ತ್ವರಿತವಾಗಿ ಮಾಡಲಾಗುತ್ತಿದೆ. ವಿವಿಧ ತಳಿಗಳನ್ನು ಪರಿಚಯಿಸುವ ನಿಟ್ಟಿನಲ್ಲಿ ಈ ಮೇಳವನ್ನು ಆಯೋಜನೆ ಮಾಡಿದೆ. ಇದರ ಜೊತೆಗೆ ಚಿಕ್ಕಲಗುಂಡಿಯಲ್ಲಿ ರೈತರು ಬೆಳೆದ ಮಾವಿನ ತಳಿಯ ಬಗ್ಗೆ ಪರಿಚಯಿಸುವ ಕೆಲಸವಾಗಬೇಕು ಎಂದರು.

ಭಾರತ ದೇಶ ಸೇರಿದಂತೆ ಇಂದು 84 ದೇಶಗಳಲ್ಲಿ ಮಾವು ಬೆಳೆಯುತ್ತಿದ್ದಾರೆ. ಬೆಳೆದಿರುವ ಮಾವನ್ನು ಕಾರ್ಬನ್ ಮುಕ್ತವಾಗಿ ಮಾಡುವ ವ್ಯವಸ್ಥೆಯಿಂದ 500 ವಿಧದ ತಳಿಗಳು ಬಂದಿವೆ. 22 ಮಾವು ಬೆಳೆಯ ಹೊಸ ತಳಿಗಳನ್ನು ಕಂಡು ಹಿಡಿದ್ದಾರೆ. ಅವುಗಳು ಯಶಸ್ವಿಯಾ ಗಿವೆ. ಹೆಚ್ಚು ಹೆಚ್ಚು ಮಾವು ಬೆಳೆಯುವ ಮೂಲಕ ಉತ್ತರ ಕರ್ನಾಟಕ ರೈತರು ಮುಂದೆ ಬರಬೇಕು ಎಂದರು. ತೋವಿವಿಯ ಮೂಲಕ ಮಾವು ಸಂಶೋಧನಾ ಕೇಂದ್ರ ಸ್ಥಾಪನೆಗೆ ಸರಕಾರದ ಮಟ್ಟದಲ್ಲಿ ಚರ್ಚಿಸಲಾಗುವುದು. ಈ ಮೂರು ದಿನಗಳ ಕಾಲ ನಡೆಯುವ ಮಾವು ಮೇಳಕ್ಕೆ ಆಗಮಿಸಿ ರೈತರು ಬೆಳೆದ ಮಾವನ್ನು ಖರಿದೀಸಲು ಮುಂ ದಾಗಬೇಕೆಂದು ತಿಳಿಸಿದರು.

> ಮಾವು ನಮ್ಮ ದೇಶದ ಹಣ್ಣುಗಳ ರಾಜ ಹಾಗೂ ವಾಣಿಜ್ಯ ಬೆಳೆಯಾಗಿದ್ದು, ಕರ್ನಾಟಕದಲ್ಲಿ ತುಂಬಾ ಪ್ರಚಲಿತವಿರುವ ಹಣ್ಣುಗಳಲ್ಲಿ 1500ಕ್ಕೂ ಹೆಚ್ಚಿನ ತಳಿಗಳು ನಮ್ಮ ಭಾರತ ದೇಶದಲ್ಲಿವೆ. ಉತ್ತರ ಕರ್ನಾಟಕದಲ್ಲಿ ಸಹ ಬಹಳಷ್ಟು ವೈವಿಧ್ಯಮಯ ತಳಿಗಳನ್ನು ನೋಡಬಹುದಾಗಿದೆ. ವೈವಿಧ್ಯಮಯ ಮಾವು ತಳಿಗಳನ್ನು ಪರಿಚಯಿಸುವ ಉದ್ದೇಶದಿಂದ ಮಾವು ಮೇಳ ಸಂಘಟಿಸಲಾಗಿದೆ. ನಮ್ಮ ಪೂರ್ವಿಕರು ಅನೇಕ ತಳಿಗಳು ಬೆಳೆದಿದ್ದು, ಅವುಗಳೆಲ್ಲವೂ ಇಂದು ಕಣ್ಮರೆಯಾಗುವ ಹಂತದಲ್ಲಿವೆ. ಅವುಗಳನ್ನು ಸಹ ಈ ಮೇಳದಲ್ಲಿ ಪರಿಚಯಿಸುವ ಕೆಲಸ ಮಾಡಲಾಗುತ್ತಿದೆ.
>
> -ಡಾ.ವಸಂತ ಗಾಣಿಗೇರ,
> ತೋವಿವಿಯ ಸಹ ಸಂಶೋಧಕ ವಿಸ್ತರಣಾ ನಿರ್ದೇಶಕ

ಕಾರ್ಯಕ್ರಮದಲ್ಲಿ ತೋಟಗಾರಿಕೆ ವಿವಿಯ ಕುಲಪತಿ ಡಾ. ತಮ್ಮಯ್ಯ, ತೋಟಗಾರಿಕೆ ಇಲಾಖೆಯ ಜಂಟಿ ನಿರ್ದೇಶಕ ರವೀಂದ್ರ ಹಕಾಟೆ, ಕಲಾದಗಿ ಹಣ್ಣು ಬೆಳೆಗಾರರ ಸಂಘದ ಅಧ್ಯಕ್ಷ ಕೆ.ಟಿ.ಪಾಟೀಲ, ತೋವಿವಿಯ ವಿಸ್ತರಣಾ ನಿರ್ದೇಶಕ ಡಾ.ವೆಂಕಟೇಶಲು, ಪ್ರಗತಿಪರ ರೈತ ಮೋಹನ ದೇಸಾಯಿ, ಮಾಜಿ ಹಣ್ಣು ಬೆಳೆಗಾರರ ಸಂಘದ ಅಧ್ಯಕ್ಷ ಪಿ.ಎಂ.ದೇಸಾಯಿ, ತೋವಿವಿಯ ಸಹ ಸಂಶೋಧನಾ ವಿಸ್ತರಣಾ ನಿರ್ದೇಶಕ ಡಾ.ವಸಂತ ಗಾಣಿಗೇರ ಸೇರಿದಂತೆ ಇತರರು ಉಪಸ್ಥಿತರಿದ್ದರು. ಮಾವು ಮೇಳದಲ್ಲಿ 100ಕ್ಕೂ ಹೆಚ್ಚು ವಿವಿಧ ತಳಿಯ ಮಾವುಗಳನ್ನು ಪ್ರದರ್ಶನಕ್ಕೆ ಇಡಲಾಗಿದೆ. ರತ್ನಗಿರಿ, ದೇವಗಡ, ಧಾರವಾಡ ಅಪೂಸ್, ಮಲ್ಲಿಕಾ, ಆರ್ಕಾ ನೀಲಕಿರಣ, ಆರ್ಕಾ ಉದಯ, ಅಮ್ರಪಲ್ಲಿ, ಸಿಂಧು, ನೀಲಮ್, ರತ್ನಾ, ದಾಶೇ ಕರಿ, ಟಾಮ್ಮಿ ಆಟಕಿನ್ಸ್ , ಖುದರ್, ಪೈರಿ, ತೋತಾಪುರಿ, ಸುಂದರಶಾ ಸೇರಿದಂತೆ ಇತರೆ ತಳಿಗಳನ್ನು ಪ್ರದರ್ಶನಕ್ಕೆ ಇಡಲಾಗುತ್ತು. ಅಲ್ಲದೇ ಮಾವಿನಿಂದ ತಯಾರಿಸಲಾದ ಮೌಲ್ಯವರ್ಧಿತ ಉತ್ಪನ್ನಗಳಾದ ಮಾವಿನ ಜ್ಯಾಂ, ಜ್ಯೂಸ್, ಉಪ್ಪಿನಕಾಯಿ, ಫಲ್ಪ್, ಒಣಮಾವು ಸೇರಿದಂತೆ ವಿವಿಧ ಉತ್ಪನ್ನಗಳ ಪ್ರದರ್ಶನ ಏರ್ಪಡಿಸಲಾಗಿತ್ತು.

ಕಲಬುರಗಿಯಲ್ಲಿ 15 ದಿನಗಳ ಉಚಿತ ಬೇಸಿಗೆ ಶಿಬಿರಕ್ಕೆ ಚಾಲನೆ

ಮಕ್ಕಳನ್ನು ರೋಬೋಟ್‌ಗಳನ್ನಾಗಿ ಮಾಡಬೇಡಿ -ರಾಜಕುಮಾರ ರಾಠೋಡ



ಕಲಬುರಗಿ,ಮೇ.17-

ಮಕ್ಕಳಲ್ಲಿ ಅಡಗಿರುವ ಸುಪ್ತ ಪ್ರತಿಭೆಯನ್ನು ಹೊರಹಾಕಲು ಬೇಸಿಗೆ ಶಿಬಿರಗಳು ಅತ್ಯುತ್ತಮ ವೇದಿಕೆಯಾಗಿದ್ದು, ಪಾಲಕರು ಕೇವಲ ಅಂಕಗಳಿಗೆ ಆದ್ಯತೆ ನೀಡಿ ಮಕ್ಕಳನ್ನು ಯಂತ್ರಗಳನ್ನಾಗಿ (ರೋಬೋಟ್) ಮಾಡಬಾರದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ರಾಜಕುಮಾರ ರಾಠೋಡ ತಿಳಿಸಿದರು.

ಶುಕ್ರವಾರ ನಗರದ ರಂಗಾಯಣ ಸಭಾಂಗಣದಲ್ಲಿ ರಾಜ್ಯ ಬಾಲ ಭವನ ಸೊಸೈಟಿ ಬೆಂಗಳೂರು, ಜಿಲ್ಲಾ ಪಂಚಾಯತ್ ಕಲಬುರಗಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಬಾಲ ಭವನ ಸಮಿತಿ ಹಾಗೂ ರಂಗಾಯಣ ಕಲಬುರಗಿ ಇವರ ಸಂಯುಕ್ತಾಶ್ರಯದಲ್ಲಿ 5 ರಿಂದ 16 ವರ್ಷದ ಮಕ್ಕಳಿಗಾಗಿ ಹಮ್ಮಿಕೊಳ್ಳಲಾ ಗಿರುವ 15 ದಿನಗಳ ಜಿಲ್ಲಾ ಮಟ್ಟದ ಉಚಿತ ಬೇಸಿಗೆ ಶಿಬಿರದ ಸಮಾರಂಭ ಉದ್ಘಾಟಿಸಿ ಗಿಡಕ್ಕೆ ನೀರುಣಿಸುವ ಮೂಲಕ ಶಿಬಿರಕ್ಕೆ ಚಾಲನೆ ನೀಡಿ ಮಾತನಾಡಿ ದರು.

ಇತ್ತೀಚಿನ ದಿನಗಳಲ್ಲಿ ಪಾಲಕರು ಕೇವಲ ಅಂಕ ಗಳಿಕೆಗೆ ಹೆಚ್ಚಿನ ಪ್ರಾಮುಖ್ಯತೆ ನೀಡುತ್ತಿರುವುದರಿಂದ, ಮಕ್ಕಳು ತಮ್ಮಲ್ಲಿರುವ ನೈಜ ಪ್ರತಿಭೆ, ಆಸೆ ಮತ್ತು ಆಕಾಂಕ್ಷೆಗಳನ್ನು ವ್ಯಕ್ತಪಡಿಸಲು ವಿಫಲರಾಗುತ್ತಿದ್ದಾರೆ ಎಂದು ಅವರು ಕಳವಳ ವ್ಯಕ್ತಪಡಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ರಾಜ್ಯ ಬಾಲ ಭವನ ಸೊಸೈಟಿಯ ರಾಜ್ಯ ಉಪಾಧ್ಯಕ್ಷರಾದ ಅನಿಲ ಕುಮಾರ್ ಜಮಾದಾರ್ ಅವರು ಮಾತನಾಡಿ,

ಮೇ 15 ರಿಂದ ಮೇ 29 ರವರೆಗೆ ನಡೆಯುವ ಈ ಬೇಸಿಗೆ ಶಿಬಿರದ ಸದುಪಯೋಗ ವನ್ನು ಎಲ್ಲಾ ಮಕ್ಕಳು ಪಡೆದುಕೊಳ್ಳ ಬೇಕು. ಪಾಲಕರು ತಮ್ಮ ಮಕ್ಕಳನ್ನು ಎಲ್ಲರೊಂದಿಗೆ ಬೆರೆಯುವಂತೆ ಪ್ರೇರೇಪಿಸಬೇಕು ಹಾಗೂ ವಿದ್ಯಾಭ್ಯಾಸದ ಜೊತೆಗೆ ವಿವಿಧ ಪಠ್ಯೇತರ ಚಟುವಟಿಕೆಗಳಲ್ಲೂ ಭಾಗವಹಿಸಲು ಉತ್ತೇಜನ ನೀಡಬೇಕು ಎಂದು ಕರೆ ನೀಡಿದರು.

ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ವಿಶ್ವಾರಾಧ್ಯ ಇಜೇರಿ ಅವರು ಮಾತನಾಡಿ, ಅಂಕಗಳಿಕೆಗಾಗಿ ಪಾಲಕರು ಮಕ್ಕಳ ಮೇಲೆ ಮಾನಸಿಕ ಒತ್ತಡ ಹೇರುತ್ತಿದ್ದಾರೆ. ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ಪಠ್ಯೇತರ ಚಟುವಟಿಕೆಗಳು ಅತ್ಯಗತ್ಯ. ಅದರೊಂದಿಗೆ ಭಾರತದ ಅಮೂಲ್ಯವಾದ ಸಂಸ್ಕೃತಿಯನ್ನು ಪ್ರತಿಯೊಂದು ಮಗುವಿನಲ್ಲೂ ಅಳವಡಿಸುವಲ್ಲಿ ಪಾಲಕರ ಪಾತ್ರ ಬಹುಮುಖ್ಯವಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧೀಕ್ಷಕರಾದ ಶೋಭಾ, ಇಲಾಖೆಯ ಸಿಬ್ಬಂದಿ, ಸಂಪನ್ಮೂಲ ವ್ಯಕ್ತಿಗಳು, ಪಾಲಕರು ಹಾಗೂ ಮುದ್ದು ಮಕ್ಕಳು ಉಪಸ್ಥಿತರಿದ್ದರು. ವಿಠಲ ಕಾರ್ಯಕ್ರಮ ನಿರೂಪಿಸಿದರು ಮತ್ತು ಜಿಲ್ಲಾ ಬಾಲ ಭವನ ಕಚೇರಿ ಸಹಾಯಕರಾದ ಮಾನು ಎಂ. ಹೂಗಾರ ವಂದಿಸಿದರು.

ಜಿಲ್ಲಾ ಸಂಖ್ಯಾ ಸಂಗ್ರಹ ಇಲಾಖೆಯ ಸಮನ್ವಯ ಸಮಿತಿ ಸಭೆ

ಮಾರ್ಗಸೂಚಿ ಪ್ರಕಾರ ಬೆಳೆ ಕಟಾವು ಪ್ರಯೋಗಗಳಾಗಲಿ



ಬಾಗಲಕೋಟೆ : ಮೇ 17-

ಕರ್ನಾಟಕ ರೈತ ಪಸಲ್ ಭಿಮಾ ಯೋಜನೆಯಡಿ ವಿವಿಧ ಹಂಗಾಮಿನ ಬೆಳೆ ಕಟಾವು ಪ್ರಯೋಗಗಳು ಮಾರ್ಗಸೂಚಿ ಅನುಸಾರ ಕೈಗೊಳ್ಳುವಂತೆ ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಇತ್ತೀಚೆಗೆ ಜರುಗಿದ ಜಿಲ್ಲಾ ಸಂಖ್ಯಾ ಸಂಗ್ರಹ ಇಲಾಖೆಯ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಹಿಂಗಾರು ಮತ್ತು ಬೇಸಿಗೆ ಹಂಗಾಮಿನ ಪ್ರಯೋಗಗಳನ್ನು ತಾಲೂಕಿನ ಕಂದಾಯ, ಕೃಷಿ, ತೋಟಗಾರಿಕೆ, ಗ್ರಾಮೀಣ ಅಭಿವೃದ್ದಿ ಮತ್ತು ಪಂಚಾಯಾತ ರಾಜ್ ಇಲಾಖೆಗಳ ಅಧಿಕಾರಿಗಳು ಸಿಬ್ಬಂದಿಗಳು ಮಾರ್ಗಸೂಚಿ ಪ್ರಕಾರ ಬೆಳೆ ಕಟಾವು ಪ್ರಯೋಗಗಳನ್ನು ನಡೆಸಲು ತಿಳಿಸಿದರು.

ಬೆಳೆ ಸಮೀಕ್ಷೆ ಕೈಗೊಳ್ಳು ಸಮಯದಲ್ಲಿ ಗ್ರಾಮ ನಿವಾಸಿ ನಿಖರವಾದ ಬೆಳೆಗಳ ವಿವರಗಳನ್ನು ದಾಖಲಿಸಬೇಕು. ಹಿಡುವಳಿದಾರರ ಜಮೀನಿನಲ್ಲಿ ನೀರಾವರಿ ಮೂಲಗಳು ಹಾಗೂ ವ್ಯವಸಾಯೇತರ ಉಪಯೋಗಕ್ಕಾಗಿ ಬಳಸಿದ ಕಟ್ಟಡಗಳ ವಿವರಗಳನ್ನು ಸರಿಯಾಗಿ ದಾಖಲಿಸಲು ತಿಳಿಸಿದರು. ಜನನ, ಮರಣ ನೋಂದಣಿಯಲ್ಲಿ ಯಾವುದೇ ಕಾರಣಕ್ಕೆ ವಿಳಂಬವಾಗಬಾರದು. ಶೇ.100 ರಷ್ಟು ನೊಂದಣಿಗೆ ಕ್ರಮಕೈಗೊಳ್ಳಬೇಕು. ಮರಣ ಕಾರಣ ವೈದ್ಯಕೀಯ ಪ್ರಮಾಣ ಪತ್ರವನ್ನು ಪ್ರತಿ ತಿಂಗಳು ಕೇಂದ್ರ ಕಚೇರಿಗೆ ಸಲ್ಲಿಸಲು ತಿಳಿಸಿದರು. ಜನನ, ಮರಣ ನೋಂದಣಿ ಸಮಯದಲ್ಲಿ ಸಂಗ್ರಹಣೆ ಆದ ಶುಲ್ಕವನ್ನು ಪ್ರತಿ ತಿಂಗಳು ಭರಿಸಲು ಕ್ರಮವಹಿಸಬೇಕು ಎಂದರು. ಸಭೆಯಲ್ಲಿ ಜಂಟಿ ಕೃಷಿ ನಿರ್ದೇಶಕ ಟಿ.ಎಸ್.ರುದ್ರೇಶಪ್ಪ, ಜಂಟಿ ತೋಟಗಾರಿಕೆ ನಿರ್ದೇಶಕ ರವೀಂದ್ರ, ಹಕಾಟೆ, ಜಿಲ್ಲಾ ಸಂಖ್ಯಾ ಸಂಗ್ರಹ ಇಲಾಖೆಯ ಜಿಲ್ಲಾ ಅಧಿಕಾರಿ ಗೌರಮ್ಮ ಸುಂಕದ, ತಹಶೀಲ್ದಾರ ವಾಸುದೇವ ಸ್ವಾಮಿ ಸೇರಿದಂತೆ ತಾಲೂಕಾ ಮಟ್ಟದ ಅಧಿಕಾರಿಗಳು ವಿಡಿಯೋ ಕಾನ್ಪರೆನ್ಸ್ ಮೂಲಕ ಹಾಜರಿದ್ದರು.

ಒಂದನೇಯ ಪುಟದಿಂದ

ಆರ್.ಡಿ.ಸಿ.ಸಿ ಬ್ಯಾಂಕ್ ನೇಮಕಾತಿ ರದ್ದುಗೊಳಿಸಿ ಹೊಸ ರೋಷ್ಟರ್ ಬಿಂದು ಪ್ರಕಾರ ನೇಮಕಾತಿ ಪ್ರಕ್ರಿಯೆ ಪ್ರಾರಂಭಿಸಬೇಕು

ಪರಿಶಿಷ್ಟ ಜಾತಿಗಳಿಗೆ ಪ್ರವರ್ಗ-ಎ, ಪ್ರವರ್ಗ-ಬಿ ಹಾಗೂ ಶಾಖಾ ವ್ಯವಸ್ಥಾಪಕ, ಸಹಾಯಕ ಪ್ರವರ್ಗ-ಸಿ ಎಂದು ವರ್ಗೀಕರಣ ಮತ್ತು ಅಟೆಂಡರ್ ಹುದ್ದೆಗಳಲ್ಲಿ ಮಾಡಲಾಗಿದೆ ಎಂದು ತಿಳಿಸಿದರು.

ಪರಿಶಿಷ್ಟ ರಾಜ್ಯ ಸರ್ಕಾರದ 08-05-2026ರ ಮೀಸಲಾತಿ ನಿಗದಿ ಮಾಡಿರುವ ಕ್ರಮ ಪ್ರಕಾರ ಯಾವುದೇ ಕಾನೂನುಬಾಹಿರವಾಗಿದೆ. ಈಗಾಗಲೇ ಆದೇಶದ ಇದ್ದಲ್ಲಿ ಎಲ್ಲಾ 101 ಪರಿಶಿಷ್ಟ ಜಾತಿಗಳಿಗೆ ಸ್ಪರ್ಧಿಸಲು ಅವಕಾಶ ನೀಡಬೇಕುಎಂದು ಸ್ಪಷ್ಟ ಸೂಚನೆ ಇದೆ. ಆದರೆ ಹಾಗೂ ರೋಸ್ಟರ್ ನಿಯಮಗಳಿಗೆ ವಿರುದ್ದವಾಗಿದೆ ಎಂದು ದೂರಿದರು.

ಪ್ರವರ್ಗವಾರು ನಡೆಯುತ್ತಿರುವ ಸಂದರ್ಶನಗಳನ್ನು ತಕ್ಷಣ ಸ್ಥಗಿತಗೊಳಿಸಿ, ಹೊಸ ರೋಸ್ಟರ್ ಬಿಂದುಗಳ ಪ್ರಕಾರ ಮರು ಅಧಿಸೂಚನೆ ಹೊರಡಿಸಬೇಕು ಎಂದು ಆಗ್ರಹಿಸಿದರು. ಇದಲ್ಲದೆ, 09-05-20260 ಎರಡನೇ ಶನಿವಾರ ಸರ್ಕಾರಿ ರಜೆ ದಿನವಾಗಿದ್ದರೂ ನೇಮಕಾತಿ ಸಮಿತಿ ಪರಿಷ್ಕೃತ ಸೂಚನೆ ಹೊರಡಿಸಿರುವುದು ಅನುಮಾನಾಸ್ಪದವಾಗಿದೆ ಎಂದು ಪ್ರಶ್ನಿಸಿದರು. ಸರ್ಕಾರದ ಆದೇಶಗಳನ್ನು ಪಾಲಿಸದೇ ನೇಮಕಾತಿ ಮುಂದುವರೆಸಿದಲ್ಲಿ ಹೈಕೋರ್ಟ್ ಹಾಗೂ ರಾಜ್ಯ ಪರಿಶಿಷ್ಟ ಜಾತಿ-ಪರಿಶಿಷ್ಟ ಪಂಗಡಗಳ ಆಯೋಗಕ್ಕೆ ದೂರು ಸಲ್ಲಿಸಲಾಗುವುದು ಎಂದು ಎಚ್ಚರಿಕೆ ನೀಡಿದರು. ಪತ್ರಿಕಾ ಗೋಷ್ಠಿಯಲ್ಲಿ ಜಿಲ್ಲಾ ಸಂಚಾಲಕ ನರಸಿಂಹಲು ನೆಲಹಾಳ, ಎಚ್ ಎಸ್ ಮಲ್ಲೇಶ್, ರಾಜು ಪಟ್ಟಿ, ಎಸ್. ಪ್ರಸಾದ್, . ವಸಂತಕುಮಾರ ಅಸ್ಕಿಹಾಳ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಸಿರುಗುಪ್ಪ: ಬೂದುಗುಪ್ಪ ಗ್ರಾಮದಲ್ಲಿ ನಮ್ಮ ಹಳ್ಳಿ ಕಲಾ ಸಂಭ್ರಮ ಸಹಾಯಕ ನಿರ್ದೇಶಕ ಬಿ ನಾಗರಾಜ್



ಸಿರುಗುಪ್ಪ ,ಮೇ.17-

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಅಭಿನಯ ಕಲಾ ಕೇಂದ್ರ, ಹಳ್ಳಿಗಳಲ್ಲಿ ಏರ್ಪಡಿಸಿರುವುದು ಶ್ಲಾಘನೀಯ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಬಿ ನಾಗರಾಜ್ ಮೆಚ್ಚುಗೆ ವ್ಯಕ್ತಪಡಿಸಿದರು ಸಂಘದ ಅಧ್ಯಕ್ಷರಾದ ಕೆ ಜಗದೀಶ್ ಅವರು ಹೊಸ ನಾಟಕಗಳನ್ನು ರಚಿಸಿ ಹಳ್ಳಿಗಳಲ್ಲಿ ನಿರಂತರ ಕಲಾ ಪ್ರದರ್ಶನ ಮಾಡುತ್ತಿದ್ದಾರೆ ಬೂದುಗುಪ್ಪ ಗ್ರಾಮಕ್ಕೆ ರಾಜ್ಯಮಟ್ಟದ ಪ್ರಶಸ್ತಿ ಪುರಸ್ಕೃತರಾದ ಇಲಕಲ್ ಉಮಾ ರಾಣಿ ಜಿಲಾನಿ ಭಾಷಾ ಭಾವಳ್ಳಿ ರೇಣುಕಾರಂತಹ ಹಿರಿಯ ಕಲಾವಿದರನ್ನು ಆಹ್ವಾನಿಸಿರುವುದಕ್ಕೆ ಹರ್ಷ ವ್ಯಕ್ತಪಡಿಸಿದರು ಅಭಿನಯ ಕಲಾ ಕೇಂದ್ರ, ಸಿರುಗುಪ್ಪ ತಾಲೂಕಿನ ಬೂದುಗುಪ್ಪ ಗ್ರಾಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಇವರ ಸಹಯೋಗದಲ್ಲಿ ಏರ್ಪಡಿಸಿದ ನಮ್ಮ ಹಳ್ಳಿ ಕಲಾ ಸಂಭ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು ಮಧ್ಯರಾತ್ರಿಯವರೆಗೆ ಪ್ರದರ್ಶನಗೊಂಡ ವಿವಿಧ ಕಾರ್ಯಕ್ರಮಗಳು ಜನಮನ ಸೂರೆ ಗೊಂಡವು ಹಿರಿಯ ಕಲಾವಿದ ಇಲಕಲ್ ಉಮಾ ಕಾರ್ಯಕ್ರಮವನ್ನು ಉದ್ಘಾಟಿಸಿ ಶುಭ ಕೋರಿದರು ವೇದಿಕೆಯಲ್ಲಿ ಕರ್ನಾಟಕ ರಾಜ್ಯ ಬಯಲಾಟ ಕಲಾವಿದರ ಸಂಘದ ರಾಜ್ಯಧ್ಯಕ್ಷರಾದ ವಿಶ್ವನಾಥ ಸಾಹುಕಾರ ರಂಗಭೂಮಿ ಕಲಾವಿದರಾದ ಭಾವಳ್ಳಿ ರೇಣುಕಾ ಕೂಡ್ಲಿಗಿ ದಿವ್ಯ ಉಪಸ್ಥಿತರಿದ್ದರು ಎಸ್ ಕೆ ಸಮೀರ್ ಅವರ ಏಕ ವ್ಯಕ್ತಿ ನೃತ್ಯ ಡಿ ಎನ್ ರೇಣುಕಾ ಬಾವಳ್ಳಿ ಅವರ ರಂಗಗೀತೆ ಎಸ್ ಕೆ ಜಿವಾನಿ ಭಾಷಾ ತಂಡದ ಸಮೂಹ ನೃತ್ಯ ಆಕರ್ಷಣೀಯವಾಗಿದ್ದವು ರಂಗಗೀತೆಗೆ ಉತ್ತನೂರು ರಾಮಣ್ಣ ರವರ ಹಾರ್ಮೋನಿಯಂ ಸಾಥ್ ಹಳೆಯ ಹಾಡುಗಳನ್ನು ನೆನಪಿಸಿಕೊಂಡರು ಅತ್ತೆ ಸೊಸೆಯರ ಸನ್ನಿವೇಶಗಳಿಂದ ಜನರನ್ನು ನಗೆಗಡಲಲ್ಲಿ ತೇಲಿಸಿದ ಗೀತಾ ಹೂಗಾರ ವಿರಚಿತ ಸಂಗಯ್ಯನ ಸಂಸಾರ ನಾಟಕದಲ್ಲಿ ಇಲಕಲ್ ಉಮಾ ಕೂಡ್ಲಿಗಿ ದಿವ್ಯ ಹಾಗೂ ಬಿ ಗುರುರಾಜ ರಾವ್ ಅಭಿನಯಿಸಿ ಜನ ಮೆಚ್ಚುಗೆ ಪಡೆದರು ಹಳ್ಳಿಗರ ಅಚ್ಚುಮೆಚ್ಚಿನ ಗಾಳಿ ಮಲ್ಲಯ್ಯ ವಿರಚಿತ ಶ್ರೀ ರೇಣುಕಾ ಮಹಾತ್ಮ ಬಯಲಾಟಕ್ಕೆ ಶಿಳ್ಳೆ ಚಪ್ಪಾಳೆ ಮೂಲಕ ಪ್ರೋತ್ಸಾಹಿಸಿದರು ಬೂದುಗುಪ್ಪ ಎರಿಸ್ವಾಮಿಯವರ ಹಾರ್ಮೋನಿಯಂ ವಾದನ ರೋಮಾಂಚಕವಾಗಿತ್ತು ರೇಣುಕಾ ಪಾತ್ರದಲ್ಲಿ ಹಿರೇಹಾಳು ಅನಿತಾ ಮೇನಕಾ ಪಾತ್ರದಲ್ಲಿ ರಾರಾವಿ ನೂರ್ ಜಾ ಜಮದಗ್ನಿ ಪಾತ್ರದಲ್ಲಿ ಶಂಕರ ಬಂಡೆ ಪೀರ ಸಾಬ್ ಪರಶುರಾಮ ಪಾತ್ರದಲ್ಲಿ ಬಸರಕೋಡು ಗಾದಿಲಿಂಗ ಕಾರ್ತ್ಯ ವೀರಾಜುನ ಪಾತ್ರದಲ್ಲಿ ಕೂರಿಗನೂರು ರಮೇಶ ಪ್ರಾಸ ಬದ್ಧ ಮಾತುಗಳಿಗೆ ಜೀವ ತುಂಬಿದರು ತಬಲಾ ಗೋಟೂರು ಗಾದಿಲಿಂಗ ರಿದಂ ಪ್ಯಾಡ್ ವಿಜಯಕುಮಾರ್ ಹೆಚ್ ವೀರಾಪುರ ಈ ಉತ್ಸಾಹಿ ಯುವಕರ ಅಬ್ಬರದ ಸಂಗೀತ ಬಯಲಾಟದ ಕುಣಿತಕ್ಕೆ ಹುರಿದುಂಬಿಸಿದವು ಶ್ರೀ ಬಸವೇಶ್ವರ ರಂಗ ಸಜ್ಜಿಕೆಯ ವೇಷಭೂಷಣಗಳು ವರ್ಣ ಮಯವಾಗಿದೆ ಎಂದು ಕರ್ನಾಟಕ ರಾಜ್ಯ ಬಯಲಾಟ ಕಲಾವಿದರ ಸಂಘದ ರಾಜ್ಯ ಅಧ್ಯಕ್ಷರಾದ ವಿಶ್ವನಾಥ ಸಾಹುಕಾರ ತಿಳಿಸಿದರು ಸಾಮಾಜಿಕ ಕಾರ್ಯಕರ್ತ ಸಾಕ್ಷರತಾ ಸದಸ್ಯ ಅಬ್ದುಲ್ ನಬಿ ಇದ್ದರು.

ಪೆಟ್ರೋಲ್ ಮತ್ತು ಡೀಸೆಲ್ ದರ ಹೆಚ್ಚಳಕ್ಕೆ ಎಸ್.ಯು.ಸಿ.ಐ ಖಂಡನೆ

ಬಳ್ಳಾರಿ, ಮೇ.17

ಎಸ್.ಯು.ಸಿ.ಐ (ಸಿ) ಪಕ್ಷದ ವತಿಯಿಂದ ಪೆಟ್ರೋಲ್ ಮತ್ತು ಡೀಸೆಲ್ ದರ ಹೆಚ್ಚಳವನ್ನು ವಿರೋಧಿಸಿ ಕುರುಗೋಡು ಪಟ್ಟಣದಲ್ಲಿಂದು ಪ್ರತಿಭಟನೆ ಮಾಡಿ, ಕೇಂದ್ರ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಲಾಯಿತು



ಸರ್ಕಾರಿ ತೈಲ ಕಂಪನಿಗಳು ಪೆಟ್ರೋಲ್ ಮತ್ತು ಡೀಸೆಲ್ ದರಗಳನ್ನು ಲೀಟರಿಗೆ ತಲಾ ರೂ. 3ರಂತೆ ಏರಿಸಿರುವ ಕ್ರಮವನ್ನು ಎಸ್ಯುಸಿಐ ಕಮ್ಯುನಿಸ್ಟ್ ಪಕ್ಷವು ತೀವ್ರವಾಗಿ ಖಂಡಿಸುತ್ತದೆ.

ಇಂಧನ ಬೆಲೆ ಏರಿಕೆಯು ಬೇರೆಲ್ಲ ಅವಶ್ಯಕ ವಸ್ತುಗಳನ್ನು ದುಬಾರಿಗೊಳಿಸಿ, ಹಣದುಬ್ಬರಕ್ಕೆ ಕಾರಣವಾಗುತ್ತಿದೆ. ಅಮೆರಿಕಾ ಇಸ್ರೇಲ್ ಕೂಟವು ಇರಾನ್ ಮೇಲೆ ನಡೆಸುತ್ತಿರುವ ಯುದ್ಧವೇ ಈ ಬೆಲೆ ಏರಿಕೆಗೆ ಕಾರಣ ಎಂದು ಕೇಂದ್ರ ಬಿಜೆಪಿ ಸರ್ಕಾರವು ಸಮರ್ಥಿಸಿಕೊಳ್ಳುತ್ತಿದೆ. ಆದರೆ ಭಾರತವು ರಷ್ಯಾದಿಂದ ರಿಯಾಯಿತಿ ದರದಲ್ಲಿ ತೈಲ ಖರೀದಿಸುವ ಅವಕಾಶವನ್ನು ಅಮೆರಿಕಾದ ಒತ್ತಡಕ್ಕೆ ಮಣಿದು ಕೈಚೆಲ್ಲಿರುವುದು ಎಲ್ಲರಿಗೂ ತಿಳಿದಿರುವ ವಿಷಯ. ಅಲ್ಲದೆ ಪೆಟ್ರೋಲ್ ಮತ್ತು ಡೀಸೆಲ್ ಬೆಲೆಯಲ್ಲಿ ಅರ್ಧದಷ್ಟು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ವಿಧಿಸುವ ತೆರಿಗೆ ಗಳೇ ಇವೆ.

ಹಾಗಾಗಿ ತಕ್ಷಣವೇ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ತೆರಿಗೆಗಳನ್ನು ಕಡಿತಗೊಳಿಸಬೇಕು, ತೈಲ ಕಂಪನಿಗಳ ಲಾಭಕ್ಕಾಗಿ, ದೇಶದೊಳಗೆಯೇ ಶುದ್ಧೀಕರಣ ಮಾಡಿ ಉತ್ಪಾದಿಸುವ ಪೆಟ್ರೋಲ್ ಮತ್ತು ಡೀಸೆಲ್ ಗಳಿಗೆ ಜಾಗತಿಕ ದರಗಳನ್ನು ನಿಗದಿ ಮಾಡುವ ನೀತಿಯನ್ನು ಕೈಬಿಡಬೇಕು. ಈ ಯುದ್ಧವನ್ನು ನಿಲ್ಲಿಸಿ, ಬೇರೆ ದೇಶಗಳ ಆಂತರಿಕ ವ್ಯವಹಾರಗಳಲ್ಲಿ ಮೂಗು ತೂರಿಸದಂತೆ ಅಮೆರಿಕಾದ ಸಾಮ್ರಾಜ್ಯಶಾಹಿಗಳ ಮೇಲೆ ಭಾರತವು ಒತ್ತಡ ಹೇರಬೇಕು ಎಂದು ಆಗ್ರಹಿಸಿದರು

ಈ ಸಂಧರ್ಭದಲ್ಲಿ ಕುರುಗೋಡು ಸ್ಥಳೀಯ ಸಮಿತಿ ಕಾರ್ಯದರ್ಶಿ ಗೋವಿಂದ್, ಸಮಿತಿ ಸದಸ್ಯರಾದ ಗುರಳ್ಳಿ ರಾಜ , ಮಣಿಕಂಠ ಕಾರ್ಮಿಕರಾದ ಅಂಬರೀಷ್, ಕುರಿ ಮಲ್ಲಯ್ಯ, ವೀರೇಶ್ , ತಿಪ್ಪೇಸ್ವಾಮಿ, ಬಸವರಾಜ್, ಶ್ರೀನಿವಾಸ್ ಸೇರಿದಂತೆ ಇತರರು ಉಪಸ್ಥಿತರಿದ್ದರು

ತಾಲೂಕು ಕಚೇರಿಯಲ್ಲಿ ಸಮನ್ವಯ ಸಮಿತಿ ಸಭೆ



ಸಿರುಗುಪ್ಪ ,ಮೇ.17-

ನಗರದ ತಹಶೀಲ್ದಾರ್ ಕಚೇರಿಯಲ್ಲಿ ರಾಷ್ಟ್ರೀಯ ಡೆಂಗೀ ದಿನಾಚರಣೆ ಮತ್ತು ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮದ ಕುರಿತು ತಾಲೂಕು ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳ ಸಹಕಾರ ಸಮನ್ವಯ ಸಮಿತಿ ಸಭೆ ಶುಕ್ರವಾರ ನಡೆಯಿತು ಉಪ ತಹಶೀಲ್ದಾರ್ ಸಿದ್ದಾರ್ಥ ಕಾರಂಜಿ ಮಾತನಾಡಿ ರಾಷ್ಟ್ರೀಯ ಡೆಂಗೀ ದಿನವನ್ನು ಪ್ರತಿ ವರ್ಷ ಆಚರಿಸಲಾಗುತ್ತದೆ ಡೆಂಗೀ ಜ್ವರ ತಡೆಗಟ್ಟುವಿಕೆ ರೋಗ ಲಕ್ಷಣಗಳ ಜಾಗೃತಿ ಮತ್ತು ನಿಯಂತ್ರಣ ಕ್ರಮಗಳ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಿ ಈಡಿಸ್ ಸೊಳ್ಳೆಗಳಿಂದ ಹರಡುವ ರೋಗದ ಬಗ್ಗೆ ಮುನ್ನೆಚ್ಚರಿಕೆ ವಹಿಸಬೇಕು ಪೋಲಿಯ ಮುಕ್ತ ಸಮಾಜ ನಿರ್ಮಿಸುವ ನಿಟ್ಟಿನಲ್ಲಿ 5 ವರ್ಷದೊಳಗಿನ ಮಕ್ಕಳಿಗೆ ಲಸಿಕೆ ಹಾಕುವ ರಾಷ್ಟ್ರೀಯ ಪಲ್ಸ್ ಪೋಲಿಯೋ ಅಭಿಯಾನದಲ್ಲಿ ಈ ಲಸಿಕೆ ಹಾಕುವ ಮೂಲಕ ಪೋಲಿಯೊ ಅಂಗವಿಕಲ ತೆಯಿಂದ ಮಕ್ಕಳನ್ನು ರಕ್ಷಿಸುವುದು ಇದರ ಮುಖ್ಯ ಉದ್ದೇಶವಾಗಿದೆ ಎಂದರು ತಾಲೂಕು ಆರೋಗ್ಯ ಅಧಿಕಾರಿ ಡಾ ದಮ್ಮೂರು ಬಸವರಾಜ್ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಮೊಹಮ್ಮದ್ ಖಾಸಿಂ, ಇಂಡಿ ಯನ್ ರೆಡ್ ಕ್ರಾಸ್ ಸೊಸೈಟಿ ಸದಸ್ಯರು ಸಾಮಾಜಿಕ ಕಾರ್ಯ ಕರ್ತ ಅಬ್ದುಲ್ ನಬಿ ತಾಲೂಕು ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಭೀಮರಾಜ್ ಸೇರಿ ಇತರರಿದ್ದರು.

ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ತ್ರೈಮಾಸಿಕ ಪ್ರಗತಿ ಪರಿಶೀಲನೆ

ಬಾಗಲಕೋಟೆ : ಮೇ 17-

ಜಿಲ್ಲಾ ಮಕ್ಕಳ ರಕ್ಷಣಾ ಘಟಕದ 3ನೇ ಮತ್ತು 4ನೇ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆ ಅಪರ ಜಿಲ್ಲಾಧಿಕಾರ ಅಶೋಕ ತೇಲಿ ಅವರ ಅಧ್ಯಕ್ಷತೆಯಲ್ಲಿ ಇತ್ತೀಚೆಗೆ ಜರುಗಿತು.

ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ನಡೆದ ತ್ರೈಮಾಸಿಕ ಸಭೆಯಲ್ಲಿ ಬಾಲನ್ಯಾಯ ಕಾಯ್ದೆ-2015ಗೆ ಸಂಬಂಧಿಸಿದ ಜಿಲ್ಲಾ ಮಕ್ಕಳ ರಕ್ಷಣಾ ಸಮಿತಿ, ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ, ಬಾಲನ್ಯಾಯ ಮಂಡಳಿ, ಜಿಲ್ಲಾ ತನಿಖಾ ಸಮಿತಿ, ಮಕ್ಕಳ ಸಲಹಾ ಮಂಡಳಿಯ ಪ್ರಗತಿಯನ್ನು ಪರಿಶೀಲಿಸಲಾಯಿತು.

ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಡಾ.ವೀಣಾ.ಎಂ ಅವರು ಮಾತನಾಡಿ ಹೆಚ್.ಐ.ವ್ಹಿ ಸೋಂಕಿತ ಮತ್ತು ಬಾಧಿತ ಮಕ್ಕಳಿಗೆ ಪೌಷ್ಠಿಕ ಆಹಾರ, ವೈದ್ಯಕೀಯ ವೆಚ್ಚ ಹಾಗೂ ಇತರೆ ವೆಚ್ಚಕ್ಕಾಗಿ ಪ್ರತೀ ಮಾಹೆ 2 ಸಾವಿರ ರೂ.ಗಳಂತೆ ಡಿ.ಬಿ.ಟಿ ಮೂಲಕ ಆರ್ಥಿಕ ಸಹಾಯಧನ ನೀಡಲಾಗುತ್ತಿದ್ದು, 2025-26ನೇ ಸಾಲಿನ ಒಟ್ಟು 356 ಮಕ್ಕಳಿಗೆ ಆರ್ಥಿಕ ಸೌಲಭ್ಯ ನೀಡಲಾಗಿದೆ ಎಂದು ತಿಳಿಸಿದರು.

ಮಕ್ಕಳ ಪಾಲನಾ ಸಂಸ್ಥೆಗಳಿಂದ ಬಿಡುಗಡೆಯಾದ ಮಕ್ಕಳು, ಅನಾಥ, ಏಕಪೋಷಕ, ಜೈಲಿನಲ್ಲಿರುವ ಪಾಲಕರ ಮಕ್ಕಳಿಗೆ ಹಾಗೂ ಇತರೆ ಮಕ್ಕಳಿಗೆ ಕುಟುಂಬದ ವಾತಾವರಣ ದಲ್ಲಿ ಬೆಳೆಯಲು ಹಾಗೂ ವಿದ್ಯಾಭ್ಯಾಸ ಮುಂದುವರೆಸಲು ಪ್ರತೀ ಮಾಹೆ 4 ಸಾವಿರ ರೂ.ಗಳಂತೆ ಡಿ.ಬಿ.ಟಿ ಮೂಲಕ ಪ್ರಾಯೋಜಕತ್ವ ಯೋಜನೆಯಡಿ ಆರ್ಥಿಕ ಸಹಾಯಧನ ನೀಡಲಾಗುವುದು. 2025-26ನೇ ಸಾಲಿನ 4ನೇ ತ್ರೈಮಾಸಿಕದಲ್ಲಿ ಒಟ್ಟು 169 ಮಕ್ಕಳಿಗೆ ಆರ್ಥಿಕ ಸೌಲಭ್ಯ



ನೀಡಲಾಗಿದೆ ಎಂದು ತಿಳಿಸಿದರು. ಹಾಗೂ 427 ಮಕ್ಕಳಿಗೆ ಅನುದಾನ ಬೇಡಿಕೆಗೆ ಕೇಂದ್ರ ಕಛೇರಿಗೆ ಸಲ್ಲಿಸಲಾಗಿದೆ. 2026-27ನೇ ಸಾಲಿಗೆ 324 ಮಕ್ಕಳನ್ನು ಸಭೆಯಲ್ಲಿ ಅನುಮೋದಿಸಲಾಯಿತು.

ಈ ತ್ರೈಮಾಸಿಕದಲ್ಲಿ ಒಟ್ಟು 58 ತರಬೇತಿ ಹಾಗೂ ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದಾಗ ಇದಕ್ಕೆ ಅಪರ ಜಿಲ್ಲಾಧಿಕಾರಿಗಳು ಪ್ರಾಥಶಾಲಾ ಮಕ್ಕಳಿಗೆ ಹೆಚ್ಚಿನ ಸಂಖ್ಯೆಯಲ್ಲಿ ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಸೂಚಿಸಿದರು. ಪೋಷಕತ್ವ ಕಾರ್ಯಕ್ರಮದಡಿ ಮಕ್ಕಳನ್ನು ತಾತ್ಕಾಲಿಕವಾಗಿ ಕುಟುಂಬ ವಾತಾವರಣದಲ್ಲಿ ಬೆಳೆಸುವ ಉದ್ದೇಶ ಒಟ್ಟು 02 ಮಕ್ಕಳನ್ನು ಪೋಷಕತ್ವದಡಿಯಲ್ಲಿ ನೀಡಲಾಗಿದೆ. ಪ್ರತೀ ತ್ರೈಮಾಸಿಕಕ್ಕೊಮ್ಮೆ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಕಚೇರಿಯಿಂದ ಅನುಸರಣೆ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಪೋಕ್ಸೋ ಕಾಯ್ದೆ-2012, ಲೈಂಗಿಕ ದೌರ್ಜನ್ಯಕ್ಕೆ ಒಳಗಾದ ಮಕ್ಕಳಿಗೆ ಅಭಯಾ ನಿಧಿ ಯೋಜನೆಯಡಿ ತುರ್ತು ವೈದ್ಯಕೀಯ ಚಿಕಿತ್ಸೆ ಗಾಗಿ ಆರ್ಥಿಕ ಸಹಾಯ ಧನ ಒದಗಿಸಲಾಗುವುದು. 3 ಮತ್ತು 4ನೇ ತ್ರೈಮಾಸಿಕದಲ್ಲಿ ಒಟ್ಟು 28 ಮಕ್ಕಳಿಗೆ ಸಹಾಯಧನ ನೀಡಲಾಗಿದೆ ಎಂದು ತಿಳಿಸಿದರು. ಬಾಲ ನ್ಯಾಯಮಂಡಳಿಯ ಸದಸ್ಯೆ ಸುವರ್ಣಾ ನಾಗಠಾಣ ಬಾಲನ್ಯಾಯ ಮಂಡಳಿ ಮುಂದೆ ದಾಖಲಾದ ಪ್ರಕರಣಗಳ ಬಗ್ಗೆ ವಿವರಿಸಿದರು. ಒಟ್ಟು 40 ಪ್ರಕರಣಗಳು ಬಾಕಿ ಇವೆ ಎಂದು ಸಭೆಗೆ ತಿಳಿಸಿದಾಗ ಬಾಕಿ ಉಳಿಯಲು ಕಾರಣವೇನೆಂದು ಮಾನ್ಯ ಅಪರ ಜಿಲ್ಲಾಧಿಕಾರಿಗಳು ಪ್ರಶ್ನಿಸಿದರು. ಚಾರ್ಜ್ ಶೀಟ್ ಸಲ್ಲಿಕೆಯಾಗದಿರುವ ಕಾರಣ ಬಾಕಿ ಉಳಿದಿವೆ ಎಂದು ತಿಳಿಸಿದರು.

18 ವರ್ಷ ಪೂರ್ಣಗೊಂಡು ಮಕ್ಕಳ ಪಾಲನಾ ಸಂಸ್ಥೆಗಳಿಂದ ಬಿಡುಗಡೆಯಾದ ಮಕ್ಕಳಿಗೆ ಉನ್ನತ ವ್ಯಾಸಂಗ ಅಥವಾ ವೃತ್ತಿ ತರಬೇತಿ ಪಡೆಯಲು ಪ್ರತೀ ಮಾಹೆ ರೂ.5,000/-ದಂತೆ ಕನಿಷ್ಠ 3 ವರ್ಷಗಳ ಕಾಲ ಡಿಬಿಟಿ ಮೂಲಕ ಆರ್ಥಿಕ ಸಹಾಯಧನ ನೀಡಲಾಗುವುದು. 3 ಮತ್ತು 4ನೇ ತ್ರೈಮಾಸಿಕದಲ್ಲಿ ಒಟ್ಟು 10 ಮಕ್ಕಳಿಗೆ ಆರ್ಥಿಕ ಸಹಾಯಧನ ನೀಡಲಾಗಿದೆ ಎಂದು ಸಭೆಗೆ ತಿಳಿಸಿದರು. ಇದಕ್ಕೆ ಮಾನ್ಯ ಅಪರ ಜಿಲ್ಲಾಧಿಕಾರಿಗಳು ಮಕ್ಕಳ ಪೂರ್ಣ ವಿಳಾಸ, ವಿದ್ಯಾಭ್ಯಾಸದ ವಿವರ ಸಲ್ಲಿಸಲು ತಿಳಿಸಿದರು.

ಕೋವಿಡ್-19 ದಿಂದ ತಂದೆ-ತಾಯಿಯನ್ನು ಕಳೆದುಕೊಂಡ 18 ವರ್ಷದೊಳಗಿನ ಮಕ್ಕಳಿಗೆ ವಿಸ್ತತ ಕುಟುಂಬದ ಆರೈಕೆಯಲ್ಲಿರುವ ಮಕ್ಕಳಿಗೆ ಪ್ರತೀ ತಿಂಗಳು ರೂ.3,500/-ದಂತೆ ಡಿಬಿಟಿ ಮೂಲಕ ಆರ್ಥಿಕ ಸಹಾಯಧನ ನೀಡಲಾಗುವುದು. ಒಟ್ಟು 02 ಮಕ್ಕಳಿಗೆ ಆರ್ಥಿಕ ಸಹಾಯಧನ ನೀಡಲಾಗಿದೆ ಎಂದು ಸಭೆಗೆ ತಿಳಿಸಿದರು. ಗ್ರಾಮ ಹಾಗೂ ತಾಲೂಕು ಮಟ್ಟದಲ್ಲಿ ಮಕ್ಕಳ ರಕ್ಷಣಾ ಸಮಿತಿ ಸಭೆಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಸಭೆಗೆ ವಿವರಿಸಿದರು.

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಮಕ್ಕಳ ಕಲ್ಯಾಣ ಸಮಿತಿ ಮುಂದೆ ಬಂದ ಪ್ರಕರಣಗಳ ಬಗ್ಗೆ ವಿವರಿಸಿದರು. ಒಟ್ಟು 123 ಪ್ರಕರಣಗಳು ದಾಖಲಾಗಿದ್ದು, ಇದರಲ್ಲಿ 74 ಪ್ರಕರಣಗಳು ಬಾಕಿ ಇವೆ ಎಂದು ಸಭೆಗೆ ತಿಳಿಸಿದರು. ಮಕ್ಕಳ ಸಹಾಯವಾಣಿ ಮುಂದೆ ದಾಖಲಾದ ಪ್ರಕರಣಗಳ ಬಗ್ಗೆ ವಿವರಿಸಿದರು. ಮಕ್ಕಳ ಸಹಾಯವಾಣಿಗೆ ಒಟ್ಟು 275 ಪ್ರಕರಣಗಳು ದಾಖಲಾಗಿದ್ದು, ಎಲ್ಲ ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದ್ದು, ಯಾವುದೇ ಪ್ರಕರಣಗಳು ಬಾಕಿ ಇರುವುದಿಲ್ಲ ಎಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಸಭೆಗೆ ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಮಂಜುನಾಥ ಡಿ, ಜಿಲ್ಲಾ ಜಿಲ್ಲಾ ಕಾರ್ಮಿಕ ಅಧಿಕಾರಿ ರಮೇಶ ಸುಂಬಡ, ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಗುರುಪಾದ ಡೂಗನವರ, ಜಿಲ್ಲಾ ಕೌಶಲ್ಯ ಅಭಿವೃದ್ಧಿ ಅಧಿಕಾರಿ ಹಿರೇಮಠ ಸೇರಿದಂತೆ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷರು ಹಾಗೂ ಸದಸ್ಯರು, ಜಿಲ್ಲಾ ಬಾಲನ್ಯಾಯ ಮಂಡಳಿ ಸದಸ್ಯರು ಉಪಸ್ಥಿತರಿದ್ದರು.

ಸಂಘಟನೆ ಬೆಳೆಯಲಿ ಸಂಘರ್ಷ ಬೇಡ

ಶಿವಮೊಗ್ಗ,ಮೇ.17-

ಸುಸಂಸ್ಕೃತ ಸಮಾಜ ನಿರ್ಮಾಣಕ್ಕೆ ಆದರ್ಶ ಚಿಂತನೆಗಳ ಅವಶ್ಯಕತೆಯಿದೆ. ಸಮಾಜದಲ್ಲಿ ಸಂಘಟನೆಗಳು ಬೆಳೆಯಲಿ ಆದರೆ ಅಧಿಕಾರಕ್ಕಾಗಿ ಸಂಘರ್ಷಗಳು ನಡೆಯಬಾರದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶನಿವಾರ ನಗರದ ಕುವೆಂಪು ರಂಗಮಂದಿರದಲ್ಲಿ ಶ್ರೀ ಬಸವೇಶ್ವರಸ್ವಾಮಿ ಪತ್ತಿನ ಸಹಕಾರ ಸಂಘದ ಶತಮಾನೋತ್ಸವ ಧರ್ಮ ಸಮಾರಂಭದ ಸಾನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಸಮಾಜದ ಉನ್ನತಿಗೆ ಮತ್ತು ಶ್ರೇಯಸ್ಸಿಗೆ ರಚನಾತ್ಮಕ ಕಾರ್ಯಗಳು ನಡೆಯಬೇಕು. ಸುಖ ನೆಮ್ಮದಿಯ ಬದುಕಿಗೆ ಆರ್ಥಿಕ ಸಂಪನ್ಮೂಲ ಬಹಳ ಮುಖ್ಯ. ದೇಹವನ್ನು ದುಡಿಮೆಗೆ ಮನಸ್ಸನ್ನು ಭಗವಂತನಿಗೆ ಅರ್ಪಿಸಿ ನಡೆದಾಗ ಬದುಕು ವಿಕಾಸಗೊಳ್ಳುತ್ತದೆ. ಸಾಲ ಪಡೆದವರು ಮರುಪಾವತಿಯನ್ನು ಸಹ ಪ್ರಾಮಾಣಿಕವಾಗಿ ಮಾಡಿದಾಗ ಸಂಘ ಸಂಸ್ಥೆಗಳು ಬೆಳೆಯುತ್ತವೆ. ಕಣಗಿನಹಾಳದ ಎಸ್.ಎಸ್.ಪಾಟೀಲರು ಸಹಕಾರಿ ಸಂಘ ಹುಟ್ಟಿ ಹಾಕಿ ಬೆಳೆಸಿದ ಕೀರ್ತಿಗೆ ಪಾತ್ರರಾಗಿದ್ದಾರೆ.

ಶ್ರೀ ಬಸವೇಶ್ವರಸ್ವಾಮಿ ಪತ್ತಿನ ಸಹಕಾರ ಸಂಘ 1925ರಲ್ಲಿ ಸ್ಥಾಪಿತಗೊಂಡು 2025ಕ್ಕೆ ನೂರು ವರುಷ ಪೂರ್ಣಗೊಂಡಿದೆ. ಈ ಶುಭ ಸಂದರ್ಭದಲ್ಲಿ ಸಂಘದ ಅಧ್ಯಕ್ಷ ಬಳ್ಳೇಕೆರೆ ಸಂತೋಷ ಅವರ ಮುಂದಾಳತ್ವದಲ್ಲಿ ಶತಮಾನೋತ್ಸವ ಸಮಾರಂಭ ಜರುಗುತ್ತಿರು



ವುದು ಸಂತೋಷದ ಸಂಗತಿ. ಈ ಸಂಘದ ಹುಟ್ಟಿನಿಂದ ಹಿಡಿದು ಇಲ್ಲಿಯವರೆಗೆ ಶ್ರಮಿಸಿದ ಆಡಳಿತ ಮಂಡಳಿಯ ನಿಸ್ವಾರ್ಥ ಸೇವೆ-ಸಹಕಾರ ಮನೋಭಾವದಿಂದ ಬೆಳೆದು ಬಲಗೊಂಡಿದೆ. ಅವರೆಲ್ಲರನ್ನು ಸ್ಮರಿಸಿ ಶುಭವನ್ನು ಹಾರೈಸುತ್ತೇವೆ ಎಂದ ಅವರು ವೀರಶೈವ-ಲಿಂಗಾಯತ ಜನತೆ ಎಲ್ಲಿಯವರೆಗೆ ಒಳ ಪಂಗಡಗಳನ್ನು ಮರೆತು ಒಗ್ಗಟ್ಟಾಗಿ ಬಾಳುವುದಿಲ್ಲವೋ ಅಲ್ಲಿಯವರೆಗೆ ಭವಿಷ್ಯವಿಲ್ಲ ಎಂದರು. ಸಾನ್ನಿಧ್ಯ ವಹಿಸಿದ ಶ್ರೀ ಕಾಶೀ ಪೀಠದ ಡಾ.ಚಂದ್ರಶೇಖರ ಜಗದ್ಗುರು ಗಳು ತಮ್ಮ ಆಶೀರ್ವಚನದಲ್ಲಿ ಸಂಘ ಸಂಸ್ಥೆಗಳು ಬೆಳೆದು ಬರಬೇಕಾದರೆ ಸದಸ್ಯರ ಸಹನೆ ಸಹಕಾರ ಮತ್ತು ತಾಳ್ಮೆ ಬಹಳ ಮುಖ್ಯ. ಪರಸ್ಪರ ಸಹಕಾರದಿಂದ ಸಮೃದ್ಧಿ ಉಂಟಾಗು ವುದರಲ್ಲಿ ಸಂದೇಹವಿಲ್ಲ. ಆರ್ಥಿಕವಾಗಿ ದುರ್ಬಲ ಗೊಂಡ ಜನತೆಗೆ ಸಂಘವು ಸಹಕಾರ ನೀಡಿ ಬೆಳೆಸಿದ್ದನ್ನು ಮರೆಯಲಾಗದು. ಶ್ರೀ ಬಸವೇಶ್ವರಸ್ವಾಮಿ ಪತ್ತಿನ ಸಹಕಾರ ಸಂಘ ಇಂದು ಶತಮಾನೋತ್ಸವ ಆಚರಿಸುತ್ತಿರುವುದು ಸಂತೋಷ ತಂದಿದೆ ಎಂದರು.

ಸಮಾರಂಭ ಉದ್ಘಾಟಿಸಿದ ಮಾಜಿ ಮುಖ್ಯ ಮಂತ್ರಿ ಬಿ.ಎಸ್.ಯಡಿಯೂರಪ್ಪನವರು ಮಾತನಾಡಿ ಮನುಷ್ಯ ಶರೀರದಲ್ಲಿರುವ ಅಂಗಗಳು ಪರಸ್ಪರ ಸಹಕಾರದಿಂದ ಕಾರ್ಯ ನಿರ್ವಹಿಸುವ ಹಾಗೆ ಮನುಷ್ಯ ಸಮಾಜದಲ್ಲಿ ಪರಸ್ಪರ ಸ್ನೇಹ ಸಹಕಾರದಿಂದ ಬೆಳೆಯಲು ಸಾಧ್ಯವಾಗುತ್ತದೆ. ಸಹಕಾರ ಕ್ಷೇತ್ರದ ಅಭಿವೃದ್ಧಿಯಾದರೆ ಜನರಿಗೆ ಆರ್ಥಿಕವಾಗಿ ಹೆಚ್ಚು ಸಹಕರಿಸಲು ಅನುಕೂಲ ವಾಗುತ್ತದೆ. ಶ್ರೀ ಬಸವೇಶ್ವರಸ್ವಾಮಿ ಪತ್ತಿನ ಸಹಕಾರ ಸಂಘ ಹೆಮ್ಮರವಾಗಿ ಬೆಳೆದು ಇಂದು ಶತಮಾನೋತ್ಸವ ಸಂಭ್ರಮ ಜರುಗುತ್ತಿರುವುದು ಪೂರ್ವದ ಪದಾಧಿಕಾರಿಗಳ ಶ್ರಮ ಸಾಧನೆ ಎಂದರೆ ತಪ್ಪಾಗದು ಎಂದರು. ಸಂಸದ ಬಿ.ವೈ.ರಾಘವೇಂದ್ರ ಅವರು ಸ್ಮರಣ ಸಂಚಿಕೆ ಬಿಡುಗಡೆ ಮಾಡಿ ಶ್ರೀ ಬಸವೇಶ್ವರಸ್ವಾಮಿ ಪತ್ತಿನ ಸಹಕಾರ ಸಂಘದ ಸಿದ್ಧಿ ಸಾಧನೆಗಳು ಸಣ್ಣವಲ್ಲ. ಸಂಘದ ಎಲ್ಲ ಸದಸ್ಯರು ಶ್ರಮ ವಹಿಸಿ ಬೆಳೆಸಿದ್ದಾರೆಂದರು.

ಎಡೆಯೂರು ಕ್ಷೇತ್ರದ ರೇಣುಕ ಶಿವಾಚಾರ್ಯರು, ಬಿಳಕಿ ರಾಚೋಟೇಶ್ವರ ಶಿವಾಚಾರ್ಯರು, ಮಳಲಿ ಮಠದ ಡಾ. ನಾಗಭೂಷಣ ಶಿವಾಚಾರ್ಯರು, ತೊಗರ್ಸಿ ಚನ್ನವೀರ ಶಿವಾಚಾರ್ಯರು, ತಾವರೆಕೆರೆ ಡಾ.ಅಭಿನವ ಸಿದ್ದಲಿಂಗ ಶಿವಾಚಾರ್ಯರು ಸಮ್ಮುಖ ವಹಿಸಿ ಮಾತನಾಡಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ ಸಂಘದ ಅಧ್ಯಕ್ಷ ಬಳ್ಳೇಕೆರೆ ಸಂತೋಷ ಮಾತನಾಡಿ ಶ್ರೀ ಬಸವೇಶ್ವರಸ್ವಾಮಿ ಪತ್ತಿನ ಸಹಕಾರ ಸಂಘದ ಶತಮಾನೋತ್ಸವ ಸಮಾರಂಭ ಶ್ರೀ ರಂಭಾಪುರಿ ಮತ್ತು ಶ್ರೀ ಕಾಶೀ ಜಗದ್ಗುರುಗಳವ ದಿವ್ಯ ಸಾನ್ನಿಧ್ಯದಲ್ಲಿ ಜರುಗುತ್ತಿರುವುದು ಹೆಮ್ಮೆಯ ಸಂಗತಿ. ಪರಮ ಪೂಜ್ಯರ ಆಶೀವಾದ ಮತ್ತು ಜನರ ಸಹಕಾರ ಯಾವಾಗಲೂ ಇರಲೆಂದು ಬಯಸಿದರು. ಇದೇ ಸಂದರ್ಭದಲ್ಲಿ ವಿಶೇಷ ಸ್ಮರಣ ಸಂಚಿಕೆ ಬಿಡುಗಡೆಗೊಳಿಸಲಾಯಿತು.

ಶಾಸಕ ಎಸ್.ಎನ್.ಚನ್ನಬಸಪ್ಪ, ಮಾಜಿ ಸಂಸದ ಆಯನೂರು ಮಂಜುನಾಥ, ವಿಧಾನ ಪರಿಷತ್ ಸದಸ್ಯ ಡಾ.ಧನಂಜಯ ಸರ್ಜಿ, ಸಿ.ಎಸ್.ದೇವರಾಜ, ಸಿ.ಎಸ್.ಷಡಕ್ಷರಿ, ಎಸ್.ಎಸ್.ಜ್ಯೋತಿಪ್ರಕಾಶ, ಎಸ್.ಕೆ.ಮರಿಯಪ್ಪ, ಎಸ್.ಪಿ.ದಿನೇಶ್, ಟಿ.ವಿ.ಶ್ರೀನಿವಾಸ, ತೇಜೋಮೂರ್ತಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು. ಸಂಘದಲ್ಲಿ ಸೇವೆ ಸಲ್ಲಿಸಿದ ಮಾಜಿ ಅಧ್ಯಕ್ಷರು ಹಾಗೂ ಆಡಳಿತ ಮಂಡಳಿಯ ಎಲ್ಲಾ ಸದಸ್ಯರಿಗೆ ಗೌರವ ಸಮರ್ಪಣೆ ಜರುಗಿತು. ಎಂ.ಆರ್. ಪ್ರಕಾಶ ಪ್ರಾಸ್ತಾವಿಕವಾಗಿ ಮಾತನಾಡಿ ಸಂಸ್ಥೆ ಬೆಳೆದು ಬಂದುದನ್ನು ವಿವರಿಸಿದರು. ಸಂಘದ ಸಂಸ್ಥಾಪಕ ಅಧ್ಯಕ್ಷ ಮಹಾಲಿಂಗಪ್ಪನವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ನಡೆಯಿತು. ಸಂಘದ ಉಪಾಧ್ಯಕ್ಷ ಕೆ.ಎಸ್.ತಾರಾನಾಥ ಸರ್ವರನ್ನು ಸ್ವಾಗತಿಸಿದರು. ಶಾಂತಾ ಆನಂದ ನಿರೂಪಿಸಿದರು.

5 ಕೋಟಿ ರೂ. ವೆಚ್ಚದ ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆ ಕಟ್ಟಡಕ್ಕೆ ಸಚಿವ ಈಶ್ವರ ಖಂಡ್ರೆ ಅವರಿಂದ ಶಂಕುಸ್ಥಾಪನೆ



ಬೀದರ, ಮೇ.17-

ಜಿಲ್ಲೆಯ ಭಾಲ್ಕಿ ತಾಲೂಕಿನ ಬ್ಯಾಲಹಳ್ಳಿ(ಕೆ) ಗ್ರಾಮದಲ್ಲಿ ಸುಮಾರು 5 ಕೋಟಿ ರೂ. ಅನುದಾನದಡಿ ನಿರ್ಮಾಣವಾಗಲಿರುವ ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆಯ ನೂತನ ಕಟ್ಟಡ ಕಾಮಗಾರಿಗೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಖಂಡ್ರೆ ಅವರು ಇಂದು ಶಂಕುಸ್ಥಾಪನೆ ನೆರವೇರಿಸಿದರು.

ನಂತರ ಮಾತನಾಡಿ, ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ಸೌಲಭ್ಯ ಒದಗಿಸುವುದು ರಾಜ್ಯ ಸರ್ಕಾರದ ಪ್ರಮುಖ ಆದ್ಯತೆಯಾಗಿದ್ದು, ಆಧುನಿಕ ಸೌಲಭ್ಯಗಳನ್ನು ಒಳಗೊಂಡ ಸುಸಜ್ಜಿತ ಶಾಲಾ ಕಟ್ಟಡ ನಿರ್ಮಾಣದಿಂದ ವಿದ್ಯಾರ್ಥಿಗಳಿಗೆ ಉತ್ತಮ ಶೈಕ್ಷಣಿಕ ವಾತಾವರಣ ಕಲ್ಪಿಸಲಾಗುತ್ತದೆ ಎಂದು ಸಚಿವರು ತಿಳಿಸಿದರು. ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ಸರ್ಕಾರ ವಿಶೇಷ ಒತ್ತು ನೀಡುತ್ತಿದ್ದು, ಗ್ರಾಮೀಣ ಭಾಗದ ಮಕ್ಕಳಿಗೂ ನಗರ ಮಟ್ಟದ ಶಿಕ್ಷಣ ಸೌಲಭ್ಯ ದೊರೆಯುವಂತೆ ಅನೇಕ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ. ಶಿಕ್ಷಣವೇ ಸಮಾಜದ ಅಭಿವೃದ್ಧಿಗೆ ಮೂಲ ಆಧಾರವಾಗಿದ್ದು, ಪ್ರತಿಯೊಬ್ಬ ಮಗುವಿಗೂ ಉತ್ತಮ ಶಿಕ್ಷಣ ದೊರೆಯಬೇಕು ಎಂಬ ಸಂಕಲ್ಪದೊಂದಿಗೆ ಸರ್ಕಾರ ಕಾರ್ಯನಿರ್ವಹಿಸುತ್ತಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಸ್ಥಳೀಯ ಜನಪ್ರತಿನಿಧಿಗಳು, ಅಧಿಕಾರಿಗಳು ಸೇರಿದಂತೆ ಗ್ರಾಮಸ್ಥರು ಹಾಗೂ ಇತರರು ಉಪಸ್ಥಿತರಿದ್ದರು.



ಜೈಲು ಬಂದಿಗಳ ಮನ ಪರಿವರ್ತನೆಗಾಗಿ ಕೊಪ್ಪಳ ಜಿಲ್ಲಾ ಕಾರಾಗೃಹದಲ್ಲಿ ಸಂವಾದ

ಕೊಪ್ಪಳ ಮೇ 17 -

ಕೊಪ್ಪಳ ಜಿಲ್ಲಾ ಕಾರಾಗೃಹದಲ್ಲಿ 140ಕ್ಕೂ ಹೆಚ್ಚು ಬಂದಿಗಳಿದ್ದು, ಅವರ ಮನ ಪರಿವರ್ತನೆಗಾಗಿ ನಾಡಿನ ಖ್ಯಾತ ಬರಹಗಾರರು ಹಾಗೂ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಪುರಸ್ಕೃತರಾದ ನಾಡೋಜ ಡಾ. ಕುಂ.ವೀರಭದ್ರಪ್ಪರವರಿಂದ ಮೇ 15 ರಂದು ಕಾರಾಗೃಹದಲ್ಲಿ ಸಂವಾದ ನಡೆಯಿತು.

ಜಿಲ್ಲಾ ಕಾರಾಗೃಹ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸಹಯೋಗದಲ್ಲಿ ಹಮ್ಮಿಕೊಂಡ ಈ ವಿಶೇಷ ಸಂವಾದ ಕಾರ್ಯಕ್ರಮದಲ್ಲಿ ಮನುಷ್ಯನ ವರ್ತನೆ, ಪೋಸ್ಕೊ ಪ್ರಕರಣಗಳು, ಜಾತಿ ವ್ಯವಸ್ಥೆ, ಬಡತನ, ಹಸಿವು ಹೀಗೆ ವಿವಿಧ ಆಸಕ್ತಿದಾಯಕ ವಿಷಯಗಳ ಕುರಿತಾಗಿ ಜೈಲು ಬಂದಿಗಳು ಪ್ರಶ್ನೆಗಳನ್ನು ಕೇಳಿ ಕುಂ.ವೀರಭದ್ರಪ್ಪ ರವರಿಂದ ಉತ್ತರ ಪಡೆದುಕೊಂಡರು.

ಗೌರವಾನ್ವಿತ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾಂತೇಶ್.ಎಸ್.ದರಗದ ಅವರು ಕಾರ್ಯಕ್ರಮ ಉದ್ಘಾಟಿಸಿದರು. ಬಳಿಕ ಅವರು ಮಾತನಾಡಿ, ಕಾರಾಗೃಹದಲ್ಲಿನ ಬಂದಿಗಳು ಮುಕ್ತವಾಗಿ ಮಾತನಾಡುವಂತಹ ವಾತಾವರಣ ಕಲ್ಪಿಸಲು ಕುಂ.ವೀರಭದ್ರಪ್ಪ ಅವರಂತಹ ಸಾಹಿತಿಗಳನ್ನು ಕಾರಾಗೃಹಕ್ಕೆ ಕರೆಯಿಸಿ ಸಂವಾದ ನಡೆಸಿದ್ದು ವಿಶೇಷ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾರಾಗೃಹದ ಅಧೀಕ್ಷಕ ಅಂಬರೀ?.ಎಸ್.ಪೂಜಾರಿ ಅವರು ಮಾತನಾಡಿ, ಬಂದಿಗಳ ತಲೆ ಎಣಿಸಿ ಕರ್ತವ್ಯ ನಿರ್ವಹಿಸಿದರೆ, ಕಾರಾಗೃಹದ ಬಂದಿಗಳು ಬದಲಾವಣೆ ಹೊಂದುವುದಿಲ್ಲ. ಬಂದಿಗಳನ್ನು ಬದಲಾವಣೆ ಮಾಡುವುದು ಕಾರಾಗೃಹದ ಮುಖ್ಯ ಉದ್ದೇಶವಾಗಿದೆ. ಈ ಹಿನ್ನೆಲೆಯಲ್ಲಿ ಈ ಸಂವಾದವನ್ನು ಆಯೋಜಿಸಲಾಗಿದೆ. ಡಾ. ಕುಂ.ವೀರಭದ್ರಪ್ಪ ಅವರಂತಹ ಬರಹಗಾರರ ಮಾತಿನಿಂದ ಬದಲಾವಣೆ ಹೊಂದಿ ಮರು ಸಾಮಾಜೀಕರಣಗೊಂಡು ತಮ್ಮ ಕುಟುಂಬದ ಜೊತೆ ಸುಂದರ ಜೀವನ ನಡೆಸಿದರೆ ಕಾರ್ಯಕ್ರಮದ ಉದ್ದೇಶ ಸಾರ್ಥಕವಾಗುತ್ತದೆ ಎಂದರು.

ನಿಮ್ಮೂರು ಸುದ್ದಿ

ಸಂಪಾದಕೀಯ

ಇನ್ನೊಂದು ಲಾಕ್‌ಡೌನ್‌ಗೆ ಸಿದ್ಧತೆ?



ಕೊರೋನ ದಿನಗಳಲ್ಲಿ ಹೇಗೆ ಕೇಂದ್ರ ಸರಕಾರ ನಯವಾದ ಮಾತುಗಳ ಮೂಲಕವೇ ಜನರ ಮೇಲೆ ಲಾಕ್‌ಡೌನ್‌ನ್ನು ಹೇರಿತು, ಅದರಿಂದಾಗಿ ಜನರು ದೈನಂದಿನ ಬದುಕಿನಲ್ಲಿ ಅದೆಷ್ಟು ಕಷ್ಟ ನಷ್ಟಗಳನ್ನು ಅನುಭವಿಸಬೇಕಾಯಿತು ಎನ್ನುವುದನ್ನು ದೇಶ ಇನ್ನೂ ಮರೆತಿಲ್ಲ. ಲಾಕ್‌ಡೌನ್‌ನ ಆ ಕರಾಳ ದಿನಗಳ ಗಾಯಗಳು ಒಣಗುವ ಮುನ್ನವೇ ಮತ್ತೆ ಈ ದೇಶದ ಮೇಲೆ ಇನ್ನೊಂದು ಲಾಕ್ ಡೌನ್ ಹೇರುವ ಹುನ್ನಾರ ನಡೆಯುತ್ತಿದೆ. ದೇಶ ಎದುರಿಸುತ್ತಿರುವ ತೈಲ ಸಮಸ್ಯೆ, ಬೆಲೆಯೇರಿಕೆಗಳ ಹಿಂದಿರುವ ತನ್ನ ಆಡಳಿತದ ವೈಫಲ್ಯಗಳನ್ನು ಮುಚ್ಚಿ ಹಾಕಿ, ಇದೀಗ ತೈಲ ಬಳಕೆಯನ್ನು ತಗ್ಗಿಸಿ, ಚಿನ್ನ ಖರೀದಿ ಮಾಡಬೇಡಿ ಎಂದು ಹೇಳಿಕೆ ನೀಡುತ್ತಿದ್ದಾರೆ. ಅಷ್ಟೇ ಅಲ್ಲ, ದಿನದಿಂದ ದಿನಕ್ಕೆ ಅವರ ಹೇಳಿಕೆಗಳು ಬದಲಾಗುತ್ತಿವೆ. ಮನೆಯಿಂದಲೇ ಕೆಲಸ ನಿರ್ವಹಿಸಿ, ಶಾಲೆಗೆ ಹೋಗಬೇಡಿ, ಆನ್‌ಲೈನ್ ತರಗತಿಗಳ ಮೂಲಕ ಶಿಕ್ಷಣಕ್ಕೆ ಆದ್ಯತೆ ನೀಡಿ ಎಂದು ಕರೆ ನೀಡುವ ಮೂಲಕ ಮತ್ತೆ ದೇಶದ ಜನರನ್ನು ಭಯ, ಆತಂಕಗಳಿಗೆ ತಳ್ಳುತ್ತಿದ್ದಾರೆ. ಪಶ್ಚಿಮ ಏಶ್ಯ ಯುದ್ಧ ಹಾಗೂ ಆರ್ಥಿಕ ಬಿಕ್ಕಟ್ಟಿನಿಂದಾಗಿ ದೇಶದಲ್ಲಿ ತೈಲ, ಎಲ್‌ಪಿಜಿ ಕೊರತೆ ಎದುರಾಗಿದೆ. ಅಷ್ಟೇ ಅಲ್ಲ, ಬೆಲೆಯೇರಿಕೆ ತೀವ್ರವಾಗುತ್ತಿದೆ. ಇದರ ಬೆನ್ನಿಗೇ ಪ್ರಧಾನಿ ಮೋದಿಯವರು ಕಡಿಮೆ ಓಡಾಡಿ, ಕಡಿಮೆ ಖರೀದಿ ಮಾಡಿ ಎಂಬ ಹೇಳಿಕೆಗಳು ದೇಶದ ಆರ್ಥಿಕತೆಗೆ ಇನ್ನಷ್ಟು ಹಿನ್ನಡೆ ಉಂಟು ಮಾಡುತ್ತಿದೆ. ಪ್ರಧಾನಿಯ ಹೇಳಿಕೆ ಹೊರ ಬಿದ್ದ ಬೆನ್ನಿಗೇ ಶೇರುಮಾರುಕಟ್ಟೆಯು ಭಾರೀ ಕುಸಿತವನ್ನು ಕಂಡಿದೆ.

ಪ್ರಧಾನಿ ಮೋದಿಯ ಪ್ರಕಾರ ಯುದ್ಧ ಕಾಲದಲ್ಲಿ ಇವೆಲ್ಲವೂ ಅನಿವಾರ್ಯವಂತೆ. ಕೊರೋನ ಸಾಂಕ್ರಾಮಿಕ ರೋಗ ಅಥವಾ ಯಾವುದೇ ಪ್ರಕೃತಿ ವಿಕೋಪದ ಸಂದರ್ಭದಲ್ಲಿ ಎದುರಾಗುವ ಆರ್ಥಿಕ ಬಿಕ್ಕಟ್ಟಿಗೆ ಜನರು ತಲೆ ಬಾಗಲೇ ಬೇಕು. ಆಗ ಸರಕಾರ ಕೈಗೆತ್ತಿಕೊಳ್ಳುವ ಕಠಿಣ ಕ್ರಮಗಳಿಗೆ ಅನಿವಾರ್ಯವಾಗಿ ತಲೆಕೊಡಬೇಕಾಗುತ್ತದೆ. ಆದರೆ ಸದ್ಯದ ಬಿಕ್ಕಟ್ಟಿಗೆ ಯಾವುದೇ ಸಾಂಕ್ರಾಮಿಕ ರೋಗವಾಗಲಿ, ಪ್ರಕೃತಿ ವಿಕೋಪವಾಗಲಿ ಕಾರಣವಲ್ಲ. ಅಮೆರಿಕ, ಇಸ್ರೇಲ್‌ನಂತಹ ಎರಡು ಪುಂಡು ದೇಶಗಳು ತಮ್ಮ ಸ್ವಾರ್ಥಕ್ಕಾಗಿ ಸೃಷ್ಟಿಸಿಕೊಂಡ ಯುದ್ಧಕ್ಕೆ ನಾವು ಬೆಲೆ ತೆರಬೇಕಾಗಿದೆ. ವಿಪರ್ಯಾಸವೆಂದರೆ, ಇದರಲ್ಲಿ ಭಾರತವೂ ಪರೋಕ್ಷವಾಗಿ ಶಾಮೀಲಾಗಿರುವುದು. ಇರಾನ್ ವಿರುದ್ಧ ದಾಳಿ ಮಾಡುವ ಹಿಂದಿನ ದಿನ ಪ್ರಧಾನಿ ಮೋದಿ ಇಸ್ರೇಲ್‌ಗೆ ಭೇಟಿ ನೀಡಿ, ಅಲ್ಲಿನ ಸಂಸತ್‌ನ ಸನ್ಮಾನವನ್ನು ಸ್ವೀಕರಿಸಿದ್ದರು. ಮಧ್ಯ ಪ್ರಾಚ್ಯದ ಕಳವಳಕಾರಿ ಸ್ಥಿತಿಯ ಅರಿವಿದ್ದೂ ಇಸ್ರೇಲ್‌ಗೆ ಭೇಟಿ ನೀಡಿ, ಅವರ ಸನ್ಮಾನವನ್ನು ಸ್ವೀಕರಿಸುವ ಮೂಲಕ ಇರಾನ್ ವಿರುದ್ಧದ ದಾಳಿಗೆ ಭಾರತ ಪರೋಕ್ಷ ಸಮ್ಮತಿಯನ್ನು ನೀಡಿದಂತಾಯಿತು. ಒಂದು ರೀತಿಯಲ್ಲಿ ಇಸ್ರೇಲ್ ಭಾರತದ ಪ್ರಧಾನಿಯನ್ನು ಹರಕೆಯ ಕುರಿ ಮಾಡಿತ್ತು. ಮಧ್ಯಪ್ರಾಚ್ಯದಲ್ಲಿ ಯುದ್ಧ ಸ್ಫೋಟಿಸುವ ಮುನ್ನವೇ ಭಾರತವು ಅಮೆರಿಕದ ಸ್ನೇಹದ ಆತುರಕ್ಕೆ ಬಿದ್ದು ರಶ್ಯ, ಇರಾನ್ ಜೊತೆಗಿನ ವ್ಯಾಪಾರ ಸಂಬಂಧವನ್ನು ಕೆಡಿಸಿಕೊಂಡಿತ್ತು. ಅವೆಲ್ಲದರ ಪರಿಣಾಮವನ್ನು ನಾವಿಂದು ಒಟ್ಟಾಗಿ ಉಣ್ಣುತ್ತಿದ್ದೇವೆ.

ದೇಶವು ಇಂದು ಎದುರಿಸುತ್ತಿರುವ ಬಿಕ್ಕಟ್ಟು ಪ್ರಧಾನಿ ಮೋದಿ ನೇತೃತ್ವದ ಸರಕಾರದ ವಿದೇಶಾಂಗ ನೀತಿಯ ವೈಫಲ್ಯದ ಫಲವಾಗಿದೆ. ಅದನ್ನೀಗ ನೀವು ಉಣ್ಣಬೇಕು ಎಂದು ದೇಶದ ಜನರನ್ನು ಕೇಳಿಕೊಳ್ಳುತ್ತಿದ್ದಾರೆ. ರಫ್ತುಗಳನ್ನು ಹೆಚ್ಚಿಸಿ, ಆಮದುಗಳನ್ನು ಕಡಿಮೆ ಮಾಡುವುದು ವಿದೇಶ ವಿನಿಮಯವನ್ನು ಹೆಚ್ಚಿಸುವ ವಿಧಾನವಾಗಿದೆ. ದೇಶವು ಆತ್ಮನಿರ್ಭರವಾಗಿದ್ದಾಗ ಇದು ಸಾಧ್ಯವಾಗುತ್ತದೆ. ಹಾಗಾದರೆ ಪ್ರಧಾನಿ ಮೋದಿ ನೇತೃತ್ವದ ಸರಕಾರ ಕಳೆದ ಹತ್ತು ವರ್ಷಗಳಲ್ಲಿ ಮಾಡಿದ್ದೇನು? ಮೇಕ್ ಇನ್ ಇಂಡಿಯಾ ಸೇರಿದಂತೆ ಸರಕಾರ ಸ್ವದೇಶಿ ಉತ್ಪಾದನೆಗಳಿಗೆ ಪ್ರೋತ್ಸಾಹ ನೀಡಲು ರೂಪಿಸಿದ ಯೋಜನೆಗಳ ಗತಿ ಏನಾಯಿತು? ಎನ್ನುವುದನ್ನು ಮೊದಲು ಪ್ರಧಾನಿಯವರು ದೇಶಕ್ಕೆ ವಿವರಿಸಬೇಕಾಗಿದೆ.

ಕೊರೋನ ಕಾಲದಲ್ಲಿ ಜನಸಾಮಾನ್ಯರ ಮೇಲೆ ಲಾಕ್‌ಡೌನ್‌ಗಳನ್ನು ಹೇರಿದ ಸರಕಾರವೇ ಇನ್ನೊಂದೆಡೆ, ಬೃಹತ್ ರಾಜಕೀಯ ಸಮಾವೇಶಗಳನ್ನು ಹಮ್ಮಿಕೊಂಡಿತು. ದಿನಸಿ ವಸ್ತುಗಳಿಗಾಗಿ ಬೀದಿಗಿಳಿದ ನಾಗರಿಕರ ಮೇಲೆ ಪೊಲೀಸರು ಲಾಠಿ ಚಾರ್ಜ್ ಮಾಡುತ್ತಿದ್ದರೆ ಅತ್ತ ಪಶ್ಚಿಮಬಂಗಾಳದಲ್ಲಿ ಪ್ರಧಾನಿ ನೇತೃತ್ವದಲ್ಲಿ ಬೃಹತ್ ರ್ಯಾಲಿ ನಡೆಯುತ್ತಿತ್ತು. ಲಾಕ್‌ಡೌನ್ ಕಾಲದಲ್ಲೇ ಕುಂಭಮೇಳಕ್ಕೆ ಅವಕಾಶ ನೀಡಿ, ಸಾವಿರಾರು ಹೆಣಗಳು ಗಂಗಾ ನದಿಯಲ್ಲಿ ತೇಲಲು ಸರಕಾರವೇ ಕಾರಣವಾಯಿತು. ಇದೀಗ ಯುದ್ಧದ ಹೆಸರಿನಲ್ಲಿ ದೇಶದ ಮೇಲೆ ಲಾಕ್‌ಡೌನ್ ಹೇರುವುದಕ್ಕೆ ಹೊರಟಿರುವ ಪ್ರಧಾನಿ ಮೋದಿಯವರ ನಡೆಯಲ್ಲಿ ಅಂದಿನ ವಿರೋಧಾಭಾಸಗಳು ಮರುಕಳಿಸಿವೆ. ಪೆಟ್ರೋಲ್ ಬಳಕೆ ಕಡಿಮೆ ಮಾಡಿ ಎಂದು ಕರೆ ನೀಡಿರುವ ಪ್ರಧಾನಿ ಮೋದಿಯವರು, ಕಳೆದ ವಿಧಾನಸಭಾಚುನಾವಣಾ ಬಿಜೆಪಿಯು ತನ್ನ ಪ್ರಚಾರಗಳಿಗಾಗಿ ವ್ಯಯ ಮಾಡಿರುವ ಪೆಟ್ರೋಲ್ ಎಷ್ಟು ಎನ್ನುವ ಪ್ರಶ್ನೆಯನ್ನು ದೇಶದ ಜನತೆ ಕೇಳುತ್ತಿದ್ದಾರೆ. ಮೊನ್ನೆಯಷ್ಟೇ ಬೆಂಗಳೂರಿಗೆ ಆಗಮಿಸುವುದಕ್ಕಾಗಿ ಪ್ರಧಾನಿ ಮೋದಿಯವರು ಮಾಡಿರುವ ವೆಚ್ಚವೆಷ್ಟು? ನಿಜಕ್ಕೂ ಪ್ರಧಾನಿ ಮೋದಿಯವರು ಸ್ವಯಂ ಅಲ್ಲಿ ಪ್ರತ್ಯಕ್ಷವಾಗದೇ ಇದ್ದರೆ ದೇಶಕ್ಕೆ ಆಗಬಹುದಾಗಿದ್ದ ನಷ್ಟವೇನು? ಎನ್ನುವ ಪ್ರಶ್ನೆಗಳನ್ನು ಜನರು ಪ್ರತಿಯಾಗಿ ಕೇಳುತ್ತಿದ್ದಾರೆ.

ಆನ್‌ಲೈನ್‌ನಲ್ಲಿ ಶಿಕ್ಷಣ ಪಡೆಯಿರಿ ಎಂದು ಕರೆ ನೀಡಿದ ಪ್ರಧಾನಿ ಮೋದಿಯವರು, ವರ್ಚುವಲ್ ಮೂಲಕ ಚುನಾವಣಾ ಪ್ರಚಾರ ನಡೆಸಿ, ವಿವಿಧ ಕಾರ್ಯಕ್ರಮಗಳ ಉದ್ಘಾಟನೆ ನಡೆಸಿ ಪೆಟ್ರೋಲ್ ವೆಚ್ಚವನ್ನು ಉಳಿಸಿ ದೇಶಕ್ಕೆ ಮಾದರಿಯಾಗಬೇಕಾಗಿತ್ತು. ಇತ್ತೀಚೆಗಷ್ಟೇ ಒಂದು ಪುರಾತನ ದೇಗುಲದ ಪುನರ್ ನಿರ್ಮಾಣದ ಅಮೃತೋತ್ಸವ ಪ್ರಧಾನಿ ನೇತೃತ್ವದಲ್ಲಿ ನಡೆಯಿತು. ರೋಡ್‌ಶೋ, ಸಾರ್ವಜನಿಕ ರ್ಯಾಲಿಗಳೂ ನಡೆದವು. ದೇಶವು ಯುದ್ಧ ಭೀತಿ, ಆರ್ಥಿಕ ಬಿಕ್ಕಟ್ಟನ್ನು ಎದುರಿಸುತ್ತಿರುವ ಸಂದರ್ಭದಲ್ಲಿ ಇವೆಲ್ಲವನ್ನೂ ಮಾಡಬಹುದಾದರೆ, ಜನಸಾಮಾನ್ಯರ ಮೂಲಭೂತ ಅಗತ್ಯಗಳಿಗೆ ಲಾಕ್‌ಡೌನ್ ಹೇರಿಕೆ ಯಾಕೆ? ವಿಪರ್ಯಾಸವೆಂದರೆ, ಕಡಿಮೆ ತೈಲ ಬಳಸಿ ಎಂದು ಪ್ರಧಾನಿ ಕರೆ ನೀಡಿರುವ ಹೊತ್ತಿನಲ್ಲೇ, ಮಧ್ಯಪ್ರದೇಶದಲ್ಲಿ ಬಿಜೆಪಿ ನಾಯಕನೊಬ್ಬ ಪಠ್ಯ ಪುಸ್ತಕ ನಿಗಮದ ಅಧ್ಯಕ್ಷರಾಗಿ ನೇಮಕಗೊಂಡ ಬೆನ್ನಿಗೇ 50 ಬೆಂಗಾವಲು ವಾಹನಗಳೊಂದಿಗೆ ತೆರಳಿರುವ ಘಟನೆ ಮಾಧ್ಯಮಗಳಲ್ಲಿ ಸುದ್ದಿಯಾಗುತ್ತಿದೆ. ಪ್ರಧಾನಿ ಮೋದಿಯ ಮಿತ ವ್ಯಯದ ಅತಿ ದೊಡ್ಡ ಅಣಕ ಇದಾಗಿದೆ. ಒಟ್ಟಿನಲ್ಲಿ ಈ ದೇಶದ ರಾಜಕಾರಣಿಗಳು ತಪ್ಪು ಮಾಡುವುದು ನಮ್ಮ ಹಕ್ಕು. ನಾವು ತಪ್ಪು ಮಾಡುತ್ತೇವೆ, ನೀವು ದಂಡ ಕಟ್ಟಿ ನಿಮ್ಮ ದೇಶಪ್ರೇಮ ಸಾಬೀತು ಪಡಿಸಿ ಎಂದು ಜನರನ್ನು ಒತ್ತಾಯಿಸುತ್ತಿದ್ದಾರೆ.

ಅಲ್ಪಸಂಖ್ಯಾತರಿಗೆ ಪರ್ಯಾಯ ಪಕ್ಷವಿಲ್ಲವೆಂಬ ಭಾವನೆಯನ್ನು ಕಾಂಗ್ರೆಸ್ ಬದಲಾಯಿಸಿಕೊಳ್ಳಬೇಕು

ರಾಜಕೀಯ ಅಧಿಕಾರ ಮತ್ತು ಸಂರಕ್ಷಣಾ ಗುಂಪು ನಮಗೆ ಅತ್ಯಗತ್ಯ. ಕಾಂಗ್ರೆಸ್ ಚುನಾವಣೆಗೂ ಮುನ್ನ ಮುಸ್ಲಿಂ ಸಮುದಾಯಕ್ಕೆ ನೀಡಿದ್ದ ಭರವಸೆಯನ್ನು ಈವರೆಗೆ ಈಡೇಸಿಸಲಿಲ್ಲ. ಮುಸ್ಲಿಂ ಸಮುದಾಯದ ನಾಯಕರ ಮೇಲೆ ಕ್ರಮ ಕೈಗೊಂಡು ಕಾಂಗ್ರೆಸ್ ಪಕ್ಷ ಅನ್ಯಾಯ ಮಾಡಿದೆ. ಇದರಿಂದಾಗಿ ಕಾಂಗ್ರೆಸ್‌ಗೆ ಮುಂದಿನ ದಿನಗಳಲ್ಲಿ ಬಹಳ ದೊಡ್ಡ ಪೆಟ್ಟು ಬೀಳಲಿದೆ.

ರಾಜ್ಯ ಕಾಂಗ್ರೆಸ್ ಪಕ್ಷದಲ್ಲಿ ಪ್ರಸ್ತುತವಾಗಿ ನಡೆಯು ಸನ್ನಿವೇಶವನ್ನು ಹೇಳಬೇಕೆಂದು ಬಯಸುತ್ತಿದ್ದು, ನಾವು ಕಾಂಗ್ರೆಸ್ ಪಕ್ಷಕ್ಕೆ ಮತ ಬ್ಯಾಂಕ್ ಅಲ್ಲವೆಂಬುದನ್ನು ಮ ಮಾಡಿಕೊಡಬೇಕು. ಇದನ್ನು ಸಾಬೀತುಮಾಡಲು ರಾಜಕೀಯದಲ್ಲಿ ಕೇವಲ ಅಧಿಕಾರ ಅಲ್ಲ ಪೂರ್ಣಾ ಇರಬೇಕು. ನಮ್ಮ ವಿದ್ವಾಂಸರು ಹೇಳುವ ರೀತಿಯಲ್ ರಾಜಕೀಯ ಪಕ್ಷಗಳು ನಮಗೆ ನೀಡಬೇಕಾದ ಹಕ್ಕು ನೀಡದಿದ್ದರೆ ಪಕ್ಷವು ಎಲ್ಲ ಸ್ಪರ್ಧೆಗಳಲ್ಲಿ ಹೋಲಿಸಬ ಮತ್ತು ಪಕ್ಷವು ಉಂಟುಮಾಡುವ ನಷ್ಟವನ್ನು ಸರಿದೂ ಸಾಧ್ಯವಾಗುವುದಿಲ್ಲ ಎಂಬುದನ್ನು ಪಕ್ಷಕ್ಕೆ ಮನ ಮಾಡಿಕೊಡಬೇಕು. ಪಕ್ಷಕ್ಕೆ ಮನವರಿಕೆಯಾಗದೇ ರೀತಿಯ ಮನಸ್ಥಿತಿಯಲ್ಲಿ ಉಳಿಯದಿದ್ದರೆ ಹೊಸ ನಾ ಹೊರಹೊಮ್ಮುವುದಿಲ್ಲ.

ಉದಾಹರಣೆಗೆ ತಮಿಳುನಾಡಿನಲ್ಲಿ ಚಲನಚಿತ್ರ ರಾಜಕೀಯ ಹಿನ್ನೆಲೆ ಇಲ್ಲದಿದ್ದರೂ ಭಾರೀ ಜಯ ಕ ಯಶಸ್ಸನ್ನು ಸಾಧಿಸುವ ಮೂಲಕ ಯಾರಾದರೂ ಯಶಸ್ಸನ್ನು ಸಾಧಿಸಬಹುದು ಎಂಬುದನ್ನು ಸಾಬೀತುಪಡಿಸಿದ್ದಾರೆ.



2023 ದಾವಣಗೆರೆಯ ಚುಣಾವಣೆಯಲ್ಲಿ ಕೇವಲ 1000 ಮತಗಳನ್ನು ಪಡೆದ ನಂತಹ ಪಕ್ಷವು ಕೆಲವು ದಿನಗಳ ಹಿಂದೆ ನಡೆದ ದಾವಣಗೆರೆ ಉಪ ಚುನಾವಣೆಯಲ್ಲಿ 18 ಸಾವಿರಕ್ಕೂ ಹೆಚ್ಚು ಮತಗಳನ್ನು ಪಡೆಯುವಲ್ಲಿ ಯಶಸ್ವಿಯಾಗಿದೆ.

ರಾಜ್ಯದಲ್ಲಿ ಪ್ರಸ್ತುತ ದಿನಗಳಲ್ಲಿ ಕಾಂಗ್ರೆಸ್ ಪಕ್ಷ ನಡೆದುಕೊಳ್ಳುತ್ತಿರುವ ರೀತಿಯನ್ನು ಗಮನಿಸಿದರೆ ಮುಂದಿನ ದಿನಗಳಲ್ಲಿ ಹಲವಾರು ಜಾತ್ಯತೀತ ಪಕ್ಷಗಳು ಹಾಗೂ ರೈತ ಸಂಘಟನೆಗಳು, ದಲಿತ ಸಂಘಟನೆಗಳು ಹಾಗೂ ಅಲ್ಪಸಂಖ್ಯಾತರ ಸಂಘಟನೆಗಳು ಇನ್ನೂ ಹಲವಾರು ಸಂಘಟನೆಗಳು ಸೇರಿ ರಾಜ್ಯದಲ್ಲಿ ಮೂರನೇ ಪಕ್ಷ ರಚಿಸುವ ಸಾಧ್ಯತೆ ಇದೆ. ಈ ಎಲ್ಲ ವಿಷಯಗಳು ಪ್ರತಿಯೊಂದು ಬಿಕ್ಕಟ್ಟು ಹೊಸ ನಾಯಕತ್ವ ಉದಯಕ್ಕೆ ಕಾರಣವಾಗುತ್ತದೆ ಎಂಬುದನ್ನು ಸ್ಪಷ್ಟಪಡಿಸುತ್ತವೆ.

ಅಲ್ಪಸಂಖ್ಯಾತರಿಗೆ ಪರ್ಯಾಯ ಪಕ್ಷವಿಲ್ಲ ಎನ್ನುವ ಚಿಂತನೆಯನ್ನು ಕಾಂಗ್ರೆಸ್ ಬದಲಾಯಿಸಿಕೊಳ್ಳಬೇಕು. ಕಾಂಗ್ರೆಸ್ ಪಕ್ಷದ ಸರ್ಕಾರದಲ್ಲಿ ಮುಸ್ಲಿಂ ಸಮುದಾಯದ ಕೇವಲ ಇಬ್ಬರು ಸಚಿವರು ಮಾತ್ರ ಇದ್ದಾರೆ. ಚುಣಾವಣ ಆಯೋಗದ ವರದಿ ಪ್ರಕಾರ 2023ರ ಚುನಾವಣೆಯಲ್ಲಿ ಒಟ್ಟು 3,91,55,182 ಕೋಟಿ ಮತಗಳು ಚಲಾವಣೆಯಾಗಿದ್ದು, ಇದರಲ್ಲಿ ರಾಜ್ಯದಲ್ಲಿ ಅಧಿಕಾರದಲ್ಲಿರುವ ಕಾಂಗ್ರೆಸ್ ಪಕ್ಷಕ್ಕೆ 1,67,89,305 ಮತಗಳನ್ನು ಪಡೆದಿದ್ದು, ಅದರಲ್ಲಿ ಮುಸ್ಲಿಂ ಸಮುದಾಯದ ಮತಗಳು 60

ನೀಡಲಿಲ್ಲಾ, ಶೃಂಗೇರಿಯ ಬಾಬಾ ಬುಡನ್ ಗಿರಿ ಸಮಸ್ಯೆಯನ್ನು ಸಹ ಬಗೆಹರಿಸಲಿಲ್ಲಾ, ಇದರ ಜೊತೆಗೆ ಇನ್ನೂ ಹಲವಾರು ಸಮಸ್ಯೆಗಳಿಗೆ ಪರಿಹಾರ ಒದಗಿಸುವ ವಿಷಯ ದೂರದ ವಿಷಯವಾಗಿದ್ದು ಇಲ್ಲಿಯವರೆಗೆ ಅದನ್ನು ಒಂದು ಬಾರಿಯೂ ಸಹ ಚರ್ಚಿಸಲಾಗಿಲ್ಲಾ. ಸಮುದಾಯದ ಉಲೇಮಾಗಳು ಹಾಗೂ ಸಾರ್ವಜನಿಕರು ಸೇರಿ ಸಮುದಾಯಕ್ಕೆ ಆದ ಅನ್ಯಾಯದ ವಿರುದ್ಧ ಧ್ವನಿ ಎತ್ತುತ್ತಿದ್ದು ಅದರಲ್ಲಿ ಯಾವುದೇ ರೀತಿಯ ತಪ್ಪಿಲ್ಲ.

ಬಾಗಲಕೋಟೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ತನ್ನ ಎದುರಾಳಿ ಬಿಜೆಪಿ ಅಭ್ಯರ್ಥಿಯನ್ನು 21,855 ಮತಗಳ ಭಾರಿ ಅಂತರದಿಂದ ಸೋಲಿಸಿದರೆ ದಾವಣಗೆರೆ ಉಪಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಕೇವಲ 5,700 ಮತಗಳಿಂದ ಗೆದ್ದಿದ್ದು, 2023 ರಲ್ಲಿ ಇಲ್ಲಿ ಕಾಂಗ್ರೆಸ್ ಅಭ್ಯರ್ಥಿ ಭಾರಿ ಮತಗಳ ಅಂತರದಿಂದ ಗೆಲುವು ಸಾಧಿಸಿದ್ರು , ಆಗ ದಾವಣಗೆರೆ ಚುನಾವಣೆಯಲ್ಲಿ ಬೇರೆ ಪಕ್ಷದಿಂದ ಮುಸ್ಲಿಂ ಅಭ್ಯರ್ಥಿಗಳು ಸ್ಪರ್ಧೆ ಮಾಡಿದ್ರು ಸಹ ಮುಂದಿನ ಬಾರಿ ಕಾಂಗ್ರೆಸ್ ನಲ್ಲಿ ಮುಸ್ಲಿಂ ಸಮುದಾಯಕ್ಕೆ ಕಾಂಗ್ರೆಸ್ ಟಿಕೆಟ್ ನೀಡುತ್ತಾರೆ ಎಂದು ಎಲ್ಲರೂ ಒಗ್ಗಟ್ಟಾಗಿ ಕಾಂಗ್ರೆಸ್ ಗೆ ಬೆಂಬಲಿಸಿದರು.

ದಾವಣಗೆರೆ ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಮುಸ್ಲಿಂ ಅಭ್ಯರ್ಥಿಗೆ ಟಿಕೆಟ್ ನೀಡಬೇಕು ಎಂದು ದಾವಣಗೆರೆ ಮುಸ್ಲಿಂ ಸಮುದಾಯದ ಜನರ ಬೇಡಿಕೆ ಇತ್ತು ಈ ಕಾರಣದಿಂದ ಮುಸ್ಲಿಂ ಸಮುದಾಯದ ಉಲಮಾಗಳು ಕಾಂಗ್ರೆಸ್ ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಮುಖ್ಯಮಂತ್ರಿ ಸಿದ್ದರಾಮಯ್ಯ ರವರಿಗೆ ಭೇಟಿಯಾಗಿ ಮುಸ್ಲಿಂಮರಿಗೆ ಟಿಕೆಟ್ ನೀಡಬೇಕು ಎಂದು ಉಸ್ತುವಾರಿ ಸಹ ಮುಸ್ಲಿಂ ಬೇಕು ಎಂದು ಲ್ಲಿ ಶಾಮನೂರು ಂದ ದಾವಣಗೆರೆ ದ್ದವೇ ಬಂಡಾಯ ದನ್ನು ಗಮನಿಸಿ ಅಭ್ಯರ್ಥಿಗಳಿಗೆ ರುಕೊಳ್ಳುವಂತೆ ಸೀರ್ ಅಹ್ಮದ್ ಮುಸ್ಲಿಂ ಅಭ್ಯರ್ಥಿ ಅಹ್ಮದ್ ರವರು ತೆರಳಿ ಪ್ರಚಾರ ಷ್ಟಕ್ಕೆ ಮುಸ್ಲಿಂ ಗ್ರೆಸ್ ಪಕ್ಷ ವಜಾ ಮಾಡಿದ್ದು ಸರಿಯಾದ ಕ್ರಮವಲ್ಲ.

ಕೇವಲ ಒಂದು ಸಣ್ಣ ತಪ್ಪಿಗೆ ಮುಸ್ಲಿಂ ಸಮುದಾಯದ ನಾಯಕರನ್ನು ನೋಟಿಸ್ ನೀಡಿದೆಯೇ ವಜಾ ಮಾಡುವ ಕಾಂಗ್ರೆಸ್ ಹೈಕಮಾಂಡ್ ಬೇರೆ ಸಮುದಾಯದ ನಾಯಕರು ಕಾಂಗ್ರೆಸ್ ಪಕ್ಷದಲ್ಲಿಯೇ ಇದ್ದು ಬೇರೆ ಪಕ್ಷದ ಅಭ್ಯರ್ಥಿಗಳಿಗೆ ಸಹಾಯ ಮಾಡಿರುವ ಸಾಕಷ್ಟು ಉದಾಹರಣೆಗಳು ಇದ್ದರೂ ಕೂಡ ನೋಡದ ರೀತಿಯಲ್ಲಿ ಬಿಂಬಿಸಿದ್ದು, ಕಾಂಗ್ರೆಸ್ ಪಕ್ಷದ ಸಾಮಾಜಿಕ ನ್ಯಾಯ ಎಲ್ಲಿ ಹೋಯಿತು. ಕೇವಲ ಮುಸ್ಲಿಂ ನಾಯಕರ ಮೇಲೆ ಕ್ರಮ ಕೈಗೊಳ್ಳುತ್ತಿರುವುದು ಸರಿಯಲ್ಲ ಎಂದು ಸಮುದಾಯದ ಜನರು ಪ್ರಶ್ನೆ ಮಾಡುತ್ತಿದ್ದಾರೆ.

ರಾಜಕೀಯ ಅಧಿಕಾರ ಮತ್ತು ಸಂರಕ್ಷಣಾ ಗುಂಪು ನಮಗೆ ಅತ್ಯಗತ್ಯ. ಕಾಂಗ್ರೆಸ್ ಚುನಾವಣೆಗೂ ಮುನ್ನ ಮುಸ್ಲಿಂ ಸಮುದಾಯಕ್ಕೆ ನೀಡಿದ್ದ ಭರವಸೆಯನ್ನು ಈವರೆಗೆ ಈಡೇಸಿಸಲಿಲ್ಲ. ಮುಸ್ಲಿಂ ಸಮುದಾಯದ ನಾಯಕರ ಮೇಲೆ ಕ್ರಮ ಕೈಗೊಂಡು ಕಾಂಗ್ರೆಸ್ ಪಕ್ಷ ಅನ್ಯಾಯ ಮಾಡಿದೆ. ಇದರಿಂದಾಗಿ ಕಾಂಗ್ರೆಸ್‌ಗೆ ಮುಂದಿನ ದಿನಗಳಲ್ಲಿ ಬಹಳ ದೊಡ್ಡ ಪೆಟ್ಟು ಬೀಳಲಿದೆ.

ಕೋರ್ಟ್‌ಗೂ ಮುನ್ನವೇ '' ಎಐ ತೀರ್ಪು: ದರ್ಶನ್ ಪ್ರಕರಣವನ್ನು 'ಸಿನಿಮಾ' ಮಾಡುತ್ತಿರುವ ಮಾಧ್ಯಮಗಳು!

ಹೈಕೋರ್ಟ್‌ನ ಆದೇಶ ದರ್ಶನ್ ಪ್ರಕರಣವೊಂದಕ್ಕೆ ಸೀಮಿತವಲ್ಲ. ಇನ್ನುಮುಂದೆ ಯೂಟ್ಯೂಬ್ ಮತ್ತು ಸಾಮಾಜಿಕ ಜಾಲತಾಣಗಳಲ್ಲಿ ವ್ಯೂಸ್ ಮತ್ತು ಟಿಆರ್‌ಪಿಗಾಗಿ ಕಾನೂನು ಮೀರುವ ಪ್ರತಿಯೊಬ್ಬರಿಗೂ ಕಠಿಣ ಸಂದೇಶ ರವಾನಿಸಿದೆ. ಆದರೆ, ಕೇಂದ್ರ ಸರ್ಕಾರ ಇಂತಹ ಬೇಜವಾಬ್ದಾರಿ ಚಾನೆಲ್‌ಗಳ ವಿರುದ್ಧ ಯಾವ ರೀತಿಯ ಕ್ರಮ ಜರುಗಿಸಲಿದೆ ಎಂಬುದನ್ನು ಕಾದು ನೋಡಬೇಕಿದೆ.

ಯಾವುದೇ ಒಂದು ಘಟನೆ ಅಥವಾ ವಿವಾದ ನಡೆದರೂ ನ್ಯಾಯಾಲಯಗಳು ತೀರ್ಪು ನೀಡುವುದಕ್ಕೂ ಮುನ್ನವೇ ಮಾಧ್ಯಮಗಳು ತಮ್ಮದೇ ಆದ ಒಂದು ತೀರ್ಮಾನಕ್ಕೆ ಬಂದುಬಿಡುತ್ತವೆ. ಇದನ್ನೇ ಇಂಗ್ಲಿಷ್‌ನಲ್ಲಿ (ಮಾಧ್ಯಮಗಳ ವಿಚಾರಣೆ) ಎಂದು ಕರೆಯಲಾಗುತ್ತದೆ. ಪ್ರಕರಣ ಇತ್ಯರ್ಥವಾಗುವ ಮುನ್ನವೇ ಅಪರಾಧಿಯನ್ನು ನಿರಪರಾಧಿಯೆಂದೋ ಅಥವಾ ನಿರಪರಾಧಿಯನ್ನು ಅಪರಾಧಿಯೆಂದೋ ತಮಗೆ ಬೇಕಾದಂತಹ ಕತೆ ಕಟ್ಟಿ ಅದನ್ನು ಎಳೆಎಳೆಯಾಗಿ ವಿವರಿಸುವ ಹಲವು ಮಾಧ್ಯಮಗಳಿವೆ. ಇವುಗಳಿಗೆ ಈಗ ಸಾಥ್ ನೀಡುತ್ತಿರುವುದು ತಂತ್ರಜ್ಞಾನ.

ಮಾಧ್ಯಮ ರಂಗದಲ್ಲಿ ಎಐ ಬಳಕೆ ಎಷ್ಟು ಸಹಾಯ ಮಾಡುತ್ತಿದೆಯೋ, ಅದರ ಬಳಕೆ ಹೆಚ್ಚಾದಂತೆ ದುರ್ಬಳಕೆಯೂ ದೊಡ್ಡ ಸವಾಲಾಗುತ್ತಿದೆ. ಮಾಧ್ಯಮಗಳು ಎಐ ತಂತ್ರಜ್ಞಾನವನ್ನು ಬಳಸಿಕೊಂಡು ಸತ್ಯಾಸತ್ಯತೆ ಮತ್ತು ಸಾರ್ವಜನಿಕ ನಂಬಿಕೆಗೆ ಧಕ್ಕೆ ತರುತ್ತಿದೆ. ಅದೇ ರೀತಿ, ರೇಣುಕಸ್ವಾಮಿ ಕೊಲೆ ಪ್ರಕರಣದಲ್ಲಿ ನಟ ದರ್ಶನ್‌ಗೆ ಸಂಬಂಧಿಸಿದ ನ್ಯಾಯಾಲಯ ವಿಚಾರಣೆಯನ್ನೂ ಮಾಧ್ಯಮಗಳು ಎಐ ತಂತ್ರಜ್ಞಾನಕ್ಕೆ ಒಡ್ಡಿ ಟಿಆರ್‌ಪಿ ಹೆಚ್ಚಿಸುವ, ಜನರ ಗಮನ ಸೆಳೆಯುವ ಗೀಳಿಗೆ ಬಿದ್ದಿದೆ.

ರೇಣುಕಸ್ವಾಮಿ ಕೊಲೆ ಪ್ರಕರಣದ ತನಿಖೆ ಮತ್ತು ವಿಚಾರಣೆಯ ಸಂದರ್ಭದಲ್ಲಿ ಮಾಧ್ಯಮಗಳು ನಡೆಸುತ್ತಿರುವ ಅತಿರೇಕದ ಹಸ್ತಕ್ಷೇಪ ಹಾಗೂ ಮೀಡಿಯಾ ಟ್ರಯಲ್ ಕುರಿತು ಹೈಕೋರ್ಟ್ ನೀಡಿರುವ ಆದೇಶ ದೇಶದ ಮಾಧ್ಯಮ ರಂಗಕ್ಕೆ ಒಂದು ಗಂಭೀರ ಎಚ್ಚರಿಕೆಯ ಗಂಟೆಯಾಗಿದೆ. ಇತರೆ ಪ್ರಕರಣಗಳಲ್ಲಿ ಎಐ ಬಳಸಿ ತಮಗೆ ಬೇಕಾದಂತೆ ದೃಶ್ಯವನ್ನು ಸೃಷ್ಟಿಸಿಕೊಳ್ಳುತ್ತಿರುವ ಮಾಧ್ಯಮಗಳು ಮತ್ತು ಯೂಟ್ಯೂಬ್ ಚಾನೆಲ್‌ಗಳು ರೇಣುಕಸ್ವಾಮಿ ಕೊಲೆ ಪ್ರಕರಣದಲ್ಲಿಯೂ ಅದೇ ಹಾದಿ ತುಳಿದಿವೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ, ಮಾಧ್ಯಮಗಳು ಎಐ ಮತ್ತು ಗ್ರಾಫಿಕ್ಸ್ ಬಳಸಿ ಸುದ್ದಿ ಪ್ರಸಾರ ಮಾಡುತ್ತಿರುವುದರ ವಿರುದ್ಧ ನಟ ದರ್ಶನ್ ಹೈಕೋರ್ಟ್ ಮೆಟ್ಟಿಲೇರಿದ್ದರು.

ದರ್ಶನ್ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಸಚಿನ್ ಶಂಕರ್ ಮಗದುಮ್ ಅವರ ಪೀಠವು, ತನಿಖಾ ಹಂತದಲ್ಲಿರುವ ಪ್ರಕರಣಗಳನ್ನು ಟಿವಿ ಚಾನೆಲ್ ಹಾಗೂ ಯೂಟ್ಯೂಬ್‌ಗಳು ಸಾರ್ವಜನಿಕ ಪ್ರದರ್ಶನದ ವಸ್ತುವನ್ನಾಗಿ ಮಾರ್ಪಡಿಸುತ್ತಿರುವುದಕ್ಕೆ ತೀವ್ರ ಕಳವಳ ಮತ್ತು ಆಕ್ರೋಶ ವ್ಯಕ್ತಪಡಿಸಿದೆ.

''ವಾಕ್ ಸ್ವಾತಂತ್ರ್ಯವು ಸಂವಿಧಾನದ ಪ್ರಮುಖ ಮೌಲ್ಯ ಹೌದು. ಆದರೆ, ಅದು ಮಾಧ್ಯಮ ಪ್ರೇರಿತ ತೀರ್ಪಾಗಿ ಬದಲಾದಾಗ ಪ್ರಜಾಪ್ರಭುತ್ವಕ್ಕೆ ಆಪತ್ತಾಗುತ್ತದೆ. ಮಾಧ್ಯಮಗಳು ಕಾವಲು ನಾಯಿಯಂತೆ () ಕೆಲಸ ಮಾಡಬೇಕೇ ಹೊರತು, ತಾವೇ ನ್ಯಾಯಾಧೀಶರು, ಜ್ಯೂರಿಗಳಂತೆ () ವರ್ತಿಸಬಾರದು'' ಎಂದು ಹೈಕೋರ್ಟ್ ಕಟುವಾಗಿ ಹೇಳಿದೆ.

''ಕೆಲವು ಟಿವಿ ಚಾನೆಲ್‌ಗಳು ಮತ್ತು ಡಿಜಿಟಲ್ ವೇದಿಕೆಗಳು ಕೃತಕ ಬುದ್ಧಿಮತ್ತೆ () ಪ್ರಾಂಪ್ಟ್‌ಗಳು, ಗ್ರಾಫಿಕ್ಸ್ ಮತ್ತು ಅನಿಮೇಷನ್‌ಗಳನ್ನು ಬಳಸಿ ನ್ಯಾಯಾಲಯದ ಕಲಾಪಗಳನ್ನು ಹಾಗೂ ಅಪರಾಧ ನಡೆದ ಸ್ಥಳವನ್ನು ತಮಗೆ ಬೇಕಾದಂತೆ ಮರುಸೃಷ್ಟಿಸುತ್ತಿವೆ. ವಿಚಾರಣಾಧೀನ ನ್ಯಾಯಾಧೀಶರ ಮುಖವನ್ನು ಮಾತ್ರ ಮರೆಮಾಚಿ, ಆರೋಪಿಗಳು ಮತ್ತು ವಕೀಲರ ಮುಖಗಳನ್ನು ಬಹಿರಂಗವಾಗಿ ಪ್ರದರ್ಶಿಸುತ್ತಿರುವುದು ಅತ್ಯಂತ ಕಳವಳಕಾರಿ ಸಂಗತಿಯಾಗಿದೆ'' ಎಂದು ಹೈಕೋರ್ಟ್ ಹೇಳಿದೆ.

ದರ್ಶನ್ ಅವರ ದೂರನ್ನು ಪರಿಶೀಲಿಸಿ, ಕೇಬಲ್ ಟೆಲಿವಿಷನ್ ನೆಟ್‌ವರ್ಕ್ ನಿಯಮಗಳ (ಪ್ರೋಗ್ರಾಂ ಕೋಡ್) ಉಲ್ಲಂಘನೆಯಾಗಿದೆಯೇ ಎಂಬುದರ ತನಿಖೆ ನಡೆಸಿ 6 ವಾರಗಳ ಒಳಗಾಗಿ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಕೇಂದ್ರ ಮಾಹಿತಿ ಮತ್ತು ಪ್ರಸಾರ ಸಚಿವಾಲಯ () ಹಾಗೂ ಎಲೆಕ್ಟ್ರಾನಿಕ್ಸ್ ಮತ್ತು ಐಟಿ ಸಚಿವಾಲಯಕ್ಕೆ () ಹೈಕೋರ್ಟ್ ಕಟ್ಟುನಿಟ್ಟಿನ ನಿರ್ದೇಶನ ನೀಡಿದೆ. ಈ ಆದೇಶದ ಅನುಷ್ಠಾನದ ಕುರಿತು 12 ವಾರಗಳ ಒಳಗೆ ಸಮಗ್ರ ವರದಿಯನ್ನು ಸಲ್ಲಿಸುವಂತೆ ಸರ್ಕಾರಿ ಅಧಿಕಾರಿಗಳಿಗೆ ತಿಳಿಸಿದೆ. ಈ ಆದೇಶವು ಎಚ್ಚರಿಕೆ ಮಾಧ್ಯಮಗಳಿಗೆ ಪ್ರಬಲವಾದ ಎಚ್ಚರಿಕೆ ನೀಡಿದೆ.

ನ್ಯಾಯಾಲಯದ ವಿಚಾರಣೆಯನ್ನು ಒಂದು ಜಾತ್ರೆ ಅಥವಾ ಮನರಂಜನೆಯ ಸರಕನ್ನಾಗಿ ಪರಿವರ್ತಿಸುತ್ತಿರುವುದು ಹೆಚ್ಚುತ್ತಿದೆ. ವಾಕ್ ಸ್ವಾತಂತ್ರ್ಯದ ಹೆಸರಿನಲ್ಲಿ ನ್ಯಾಯಾಂಗದ ತಟಸ್ಥತೆಯನ್ನು ಕೆಡಿಸಲು ಮತ್ತು ಸಾರ್ವಜನಿಕರಲ್ಲಿ ಪೂರ್ವಗ್ರಹ ಪೀಡಿತ ಅಭಿಪ್ರಾಯ ಮೂಡಿಸುವ ಯತ್ನಗಳು ನಿರಂತರವಾಗಿ ನಡೆಯುತ್ತಿದೆ. ಅಷ್ಟಕ್ಕೂ ಮಾಧ್ಯಮಗಳು ಸಮಾಜದ ಕಣ್ಣಾಗಬೇಕೇ ಹೊರತು ತಾವೇ ತೀರ್ಪು ಕೊಡುವ ಶಕ್ತಿಯಾಗಬಾರದು. ಎಐ ತಂತ್ರಜ್ಞಾನವನ್ನು ಸತ್ಯ ಶೋಧನೆಗೆ ಬಳಸಬೇಕೇ ಹೊರತು, ಕಲ್ಪಿತ ಅಪರಾಧದ ದೃಶ್ಯಗಳನ್ನು ಸೃಷ್ಟಿಸಿ ವ್ಯಕ್ತಿತ್ವ ಹರಣ ಮಾಡಲು ಅಲ್ಲ.

ಈ ಆದೇಶ ದರ್ಶನ್ ಪ್ರಕರಣವೊಂದಕ್ಕೆ ಸೀಮಿತವಲ್ಲ. ಇನ್ನುಮುಂದೆ ಯೂಟ್ಯೂಬ್ ಮತ್ತು ಸಾಮಾಜಿಕ ಜಾಲತಾಣಗಳಲ್ಲಿ ವ್ಯೂಸ್ ಮತ್ತು ಟಿಆರ್‌ಪಿಗಾಗಿ ಕಾನೂನು ಮೀರುವ ಪ್ರತಿಯೊಬ್ಬರಿಗೂ ಕಠಿಣ ಸಂದೇಶ ರವಾನಿಸಿದೆ. ಆದರೆ ಕೇಂದ್ರ ಸರ್ಕಾರ ಇಂತಹ ಬೇಜವಾಬ್ದಾರಿ ಚಾನೆಲ್‌ಗಳ ವಿರುದ್ಧ ಯಾವ ರೀತಿಯ ಕ್ರಮ ಜರುಗಿಸಲಿದೆ ಎಂಬುದನ್ನು ಕಾದು ನೋಡಬೇಕಿದೆ.

ಇಲ್ಲಿ ದರ್ಶನ್ ಅಪರಾಧಿಯೋ, ನಿರಪರಾಧಿಯೋ ಎಂದು ಸಾಬೀತಾಗುವುದು ಸಂಪೂರ್ಣ ವಿಚಾರಣೆ ನಡೆದು ನ್ಯಾಯಾಲಯ ತೀರ್ಪು ನೀಡಿದ ಬಳಿಕ. ಅಷ್ಟಕ್ಕೂ ಕಾನೂನಿನ ಪ್ರಕಾರ ತಪ್ಪು ಸಾಬೀತಾಗುವವರೆಗೂ ಆರೋಪ ಹೊತ್ತ ಪ್ರತಿಯೊಬ್ಬನೂ ಕೇವಲ ಆರೋಪಿಯಷ್ಟೇ. ಆದರೆ, ಮಾಧ್ಯಮಗಳು ಮೊದಲೇ ನ್ಯಾಯಮೂರ್ತಿಗಳ ಸ್ಥಾನದಲ್ಲಿ ಕೂತು ಆರೋಪಿಯನ್ನು ಅಪರಾಧಿಯನ್ನಾಗಿಸುತ್ತದೆ. ಇದರಿಂದಾಗಿ ಸಮಾಜದಲ್ಲಿ ಆತನಿಗೆ ಮತ್ತು ಆತನ ಕುಟುಂಬಕ್ಕೆ ಆಗಿರುವ ಮಾನಹಾನಿಯನ್ನು ಸರಿಪಡಿಸಲು ಸಾಧ್ಯವೇ ಇಲ್ಲದಂತಾಗುತ್ತದೆ. ಇನ್ನೂ ಕೆಲವು ಪ್ರಕರಣಗಳಲ್ಲಿ ಅಪರಾಧಿಯನ್ನೂ ಈ ಮಾಧ್ಯಮಗಳು ನಿರಪರಾಧಿಯನ್ನಾಗಿಸುತ್ತದೆ ಎಂಬುದು ವಾಸ್ತವ!



ಸಾಂಸ್ಕೃತಿಕ ಕಾರ್ಯಕ್ರಮಗಳು ವೀಕ್ಷಿಸುವುದು ಮನಸ್ಸಿಗೆ ನೆಮ್ಮದಿ:ಪಿ ಗಾದೆಪ್ಪ

ಬಳ್ಳಾರಿ, ಮೇ.17

ಬಳ್ಳಾರಿಯ ರಾಘವ ಕಲಾಮಂದಿರದಲ್ಲಿ ಆಲಾಪ್ ಸಂಗೀತ ಕಲಾಟ್ರಸ್ಟ್ ಬಳ್ಳಾರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಇವರ ವಿಶೇಷ ಘಟಕ ಯೋಜನೆ ಅಡಿಯಲ್ಲಿ ''ಸಾಂಸ್ಕೃತಿಕ ಕಲಾ ವೈಭವ'' ಎನ್ನುವ ಕಾರ್ಯಕ್ರಮವನ್ನು ಬಳ್ಳಾರಿಯ ಮಹಾನಗರ ಪಾಲಿಕೆಯ ಪೂಜ್ಯ ಮಹಾಪೌರ ಪಿ. ಗಾದೆಪ್ಪ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಾ, ಇವತ್ತಿನ ದಿನಮಾನದಲ್ಲಿ ಕಲೆ,ಸಾಹಿತ್ಯ,ಸಂಸ್ಕೃತಿಗೆ ಬಳ್ಳಾರಿಯಲ್ಲಿ ನೀರಸ ಪ್ರತಿಕ್ರಿಯೆ ವ್ಯಕ್ತವಾಗುತ್ತಿದೆ ಅದಕ್ಕೆ ಕಾರಣ ಟಿವಿ ಮತ್ತು ಮೊಬೈಲ್ ಗಳ ಹಾವಳಿ ಆದರೂ ಕೂಡ ಈ ಕಾರ್ಯಕ್ರಮಕ್ಕೆ ಇಷ್ಟು ಜನ ಸೇರಿರುವುದು ತುಂಬಾ ಸಂತೋಷವಾಗುತ್ತಿದೆ ಎಂದು ತಿಳಿಸಿ ಆಲಾಪ್ ಸಂಗೀತ ಕಲಾಟ್ರಸ್ಟ್ ಹಾಗೂ ಕನ್ನಡ ಮತ್ತು ಇಲಾಖೆ ಅಡಿಯಲ್ಲಿ ಕಾರ್ಯಕ್ರಮ ಆಯೋಜನೆ ಮಾಡಿರುವುದಕ್ಕೆ ಧನ್ಯವಾದಗಳು ತಿಳಿಸಿದರು, ಮುಖ್ಯ ಅತಿಥಿಗಳಾಗಿ ಶಿವಲಿಂಗಪ್ಪ ಹಂದಿಹಾಳ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಪುರಸ್ಕೃತರು,

ಮಾಜಿ ಅಧ್ಯಕ್ಷರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಬಳ್ಳಾರಿ, ಶ್ರೀಮತಿ ನೇತ್ರಾವತಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಅಧಿಕಾರಿ, ಮುದ್ದಟನೂರು ತಿಪ್ಪೇಸ್ವಾಮಿ ಕಾರ್ಯದರ್ಶಿಗಳು ಬಳ್ಳಾರಿ ಜಿಲ್ಲಾ ಕಲಾವಿದರ ಸಂಘ ಇನ್ನು ಮುಂತಾದವರು ಪಾಲ್ಗೊಂಡಿದ್ದರು. ಆಲಾಪ್ ಸಂಗೀತ ಕಲಾಟ್ರಸ್ಟ್‌ನ ಅಧ್ಯಕ್ಷರಾದ ಶ್ರೀ ರಮಣಪ್ಪ ಭಜಂತ್ರಿ ನವರು ವೇದಿಕೆ ಮೇಲಿರುವ ಗಣ್ಯರನ್ನು ಸ್ವಾಗತಿಸುತ್ತ ಸುಮಾರು ಹತ್ತು ವರ್ಷಗಳಿಂದ ನಮ್ಮ ಸಂಸ್ಥೆ ವತಿಯಿಂದ ಬಳ್ಳಾರಿ ನಗರವಲ್ಲದೇ ಅನೇಕ ಕಡೆ ಸಾಂಸ್ಕೃತಿಕ ಕಾರ್ಯಕ್ರಮವನ್ನು ಆಯೋಜಿಸುತ್ತ ಬಂದಿದ್ದೇವೆ ಎಂದು ಪ್ರಾಸ್ತಾವಿಕ ನುಡಿಯಲ್ಲಿ ತಿಳಿಸಿದರು. ವೇದಿಕೆಯ ಕಾರ್ಯಕ್ರಮದ ನಂತರ ಸುಗಮ ಸಂಗೀತ-ಜಡೇಶ ಎಮ್ಮಿಗನೂರು

ಕಲಾತಂಡ, ಜಾನಪದ ನೃತ್ಯ-ಅಭಿನಯ ಮತ್ತು ತಂಡ

ತೊಗಲುಗೊಂಬೆ ಪ್ರದರ್ಶನ- ಶ್ರೀಮತಿ ಹುಲಿಗೆಮ್ಮ ಮತ್ತು ತಂಡ ಬಯಲಾಟ-ಭೀಮೇಶ್ ಸಿರಿಗೇರಿ ಇವರ ತಂಡದಿಂದ ಅದ್ಭುತವಾಗಿ ಸಾಂಸ್ಕೃತಿಕ ಕಾರ್ಯಕ್ರಗಳು ಮೂಡಿ ಬಂದವು.ಶ್ರೀ ಕೆ.ಜಿ. ಆಂಜನೇಯ ಸಹಾಯಕ ನಿರ್ದೇಶಕರು ಅಕ್ಷರ ದಾಸೋಹ ಕೂಡ್ಲಿಗಿ ಇವರು ಕಾರ್ಯಕ್ರಮವನ್ನು ನಿರೂಪಿಸಿ, ವಂದಿಸಿದರು.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR